ಸಂಪುಟ : 11 ಸಂಚಿಕೆ: 74 ಪುಟ : 4+2 ಬೆಲೆ: 3.00 ಮಂಗಳವಾರ ಏಪ್ರಿಲ್ 21 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 74 Pages : 4+2 Price : 3.00 Tuesday April 21 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವೇಶ್ವರ ಜಯಂತಿ ಅದ್ದೂರಿ ಆಚರಣೆಯಲ್ಲಿ ಎಸ್.ವಿ. ಸಂಕನೂರು

# ಬಸವಣ್ಣನವರ ತತ್ವಗಳು ಇಂದಿಗೂ ಪ್ರಸ್ತುತ



■ ವಿಜಯಸಾಕ್ಷಿ ಸುದ್ದಿ, ಗದಗ

"ಜಗಜ್ಯೋತಿ ಬಸವೇಶ್ವರರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾದವರಲ್ಲ, ಅವರು ವಿಶ್ವಮಾನವ. ಅವರ 'ಕಾಯಕವೇ ಕೈಲಾಸ' ಮತ್ತು 'ದಾಸೋಹ' ತತ್ವಗಳು ಇಂದಿನ ಆಧುನಿಕ ಯುಗಕ್ಕೂ ಅತ್ಯಂತ ಪ್ರಸ್ತುತವಾಗಿವೆ. ಅವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು" ಎಂದು ವಿಧಾನ ಪರಿಷತ್ ಶಾಸಕ ಡಾ. ಎಸ್.ವಿ. ಸಂಕನೂರು ಹೇಳಿದರು.

ನಗರದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಜಿಲ್ಲಾಧಿಕಾರಿ ಭವನದ ಅಡಿಟೋರಿಯಂ ಸಭಾಂಗಣದಲ್ಲಿ ಸೋಮವಾರ ಆಯೋಜಿಸಲಾಗಿದ್ದ ಕರ್ನಾಟಕದ ಸಾಂಸ್ಕೃತಿಕ ನಾಯಕ ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಸವಣ್ಣನವರು 12ನೇ ಶತಮಾನದಲ್ಲಿಯೇ ಲಿಂಗ ಸಮಾನತೆ, ಜಾತಿ ಪದ್ಧತಿ ನಿರ್ಮೂಲನೆ ಹಾಗೂ ಶೋಷಣೆಯ ವಿರುದ್ಧ ಹೋರಾಟ ನಡೆಸಿ ಅನುಭವ ಮಂಟಪದ ಮೂಲಕ ಪ್ರಜಾಪ್ರಭುತ್ವದ ಅಡಿಪಾಯ ಹಾಕಿದರು. ಕೇವಲ ಅವರ ಫೋಟೋಗಳಿಗೆ ಪೂಜೆ ಮಾಡುವುದರಿಂದ ಸಾಲದು, ಅವರ ವಚನಗಳ ಸಾರವನ್ನು ನಮ್ಮ ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, "ಕಾಯಕವೇ ಕೈಲಾಸ" ಎಂಬ ಮಂತ್ರದೊಂದಿಗೆ ಬಸವಣ್ಣನವರು ದುಡಿಮೆಗೆ ಗೌರವ ನೀಡಿದ್ದು, ಪ್ರತಿಯೊಂದು ವೃತ್ತಿಯೂ ತನ್ನದೇ ಆದ ಗೌರವ ಹೊಂದಿದೆ ಎಂದು ಸಾರಿದರು. ಮನುಷ್ಯ ಹುಟ್ಟುವಾಗ ಏನನ್ನೂ ತರುವುದಿಲ್ಲ, ಹೋಗುವಾಗ ಏನನ್ನೂ ಒಯ್ಯುವುದಿಲ್ಲ ಎಂಬ ಸತ್ಯವನ್ನು ಅರಿತು ಮಾನವೀಯತೆ, ಸಮಾನತೆ ಹಾಗೂ ಸಾಮರಸ್ಯವನ್ನು ಬೆಳೆಸುವ ಅಗತ್ಯವಿದೆ ಎಂದರು.

ಮೊರಾರ್ಜಿ ದೇಸಾಯಿ ವಸತಿ ಪದವಿಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕರಾದ ಸೋಮಶೇಖರ ಕನಕಾಚಲ ಮಾತನಾಡಿ, ಬಸವಣ್ಣನವರು ವಿಶ್ವಬಂಧುತ್ವದ ಸಂದೇಶ ಸಾರಿದ ಮಹಾನ್ ಚಿಂತಕರಾಗಿದ್ದು, "ಇವನಾರವ ಇವನಾರವ ಎನ್ನದೆ ಇವ ನಮ್ಮವ" ಎಂಬ ವಚನದ ಮೂಲಕ ಮಾನವೀಯತೆಯನ್ನು ಎತ್ತಿ ಹಿಡಿದಿದ್ದಾರೆ ಎಂದರು.

ಪ್ರಸಾದ ಸುತಾರ ಹಾಗೂ ಗುರುನಾಥ ಸುಂದರ ವಚನ ಗಾಯನ ಪ್ರಸ್ತುತಪಡಿಸಿದರು. ವೀರಣ್ಣ ಅಂಗಡಿ ಮತ್ತು ಸಂಗಡಿಗರು ನಾಡಗೀತೆ ಹಾಡಿದರು.

ಈ ಸಂದರ್ಭದಲ್ಲಿ ಡಾ. ಗಿರೀಜಾ ಹಸವಿ ಅವರ ಬರೆದ "ಬಸವ ಚೇತನ" ಗ್ರಂಥವನ್ನು ವಿಧಾನ ಪರಿಷತ್ ಶಾಸಕ ಡಾ. ಎಸ್.ವಿ. ಸಂಕನೂರು, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹಾಗೂ ತ್ರಿವಿಧ ದಾಸೋಹಿ ಜಗದ್ಗುರು ಶ್ರೀ ಮನ್ನಿರಂಜನ ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳ ಅಮೃತ ಹಸ್ತದಿಂದ ಬಿಡುಗಡೆ ಮಾಡಲಾಯಿತು. ಇದೇ ವೇಳೆ ಎಸ್ಎಸ್ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಎಸ್.ಎನ್. ಬಳ್ಳಾರಿ, ವಿನಾಯಕ ಮಾನ್ವಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗಣ್ಯರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

> "ಇಂದಿನ ಯುವ ಪೀಳಿಗೆಗೆ ಶರಣರ ವಿಚಾರಧಾರೆಗಳನ್ನು ತಲುಪಿಸುವ ಅಗತ್ಯವಿದೆ. ಸಮಾಜದಲ್ಲಿ ಶಾಂತಿ ಮತ್ತು ಸಹಬಾಳ್ವೆ ನೆಲೆಸಬೇಕಾದರೆ ಬಸವ ಪಥವೇ ದಾರಿದೀಪ."
>
> – **ಡಾ. ಎಸ್.ವಿ. ಸಂಕನೂರು,** ವಿಧಾನ ಪರಿಷತ್ ಶಾಸಕ.

### ವಿಶೇಷ ಮೆರವಣಿಗೆ

ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನ ಮಠದ ಆವರಣದಲ್ಲಿ ಜಗಜ್ಯೋತಿ ಶ್ರೀ ಬಸವೇಶ್ವರರ ಪ್ರತಿಮೆಗೆ ಗೌರವ ಮಾಲಾರ್ಪಣೆ ಮಾಡಿ ಮೆರವಣಿಗೆಗೆ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಚಾಲನೆ ನೀಡಿದರು. ಮೆರವಣಿಗೆ ತೋಂಟದಾರ್ಯ ಮಠದಿಂದ ಪ್ರಾರಂಭವಾಗಿ ಮಹೇಂದ್ರಕರ ಸರ್ಕಲ್, ಟಾಂಗ ಕೂಟ, ಬಸವೇಶ್ವರ ವೃತ್ತ, ಕೆ.ಎಚ್. ಪಾಟೀಲ್ ವೃತ್ತ, ಭೂಮರೆಡ್ಡಿ ಸರ್ಕಲ್, ರೋಟರಿ ಸರ್ಕಲ್ ಮಾರ್ಗವಾಗಿ ಮಠದವರೆಗೆ ಸಂಚರಿಸಿತು.

## ಗೊಜನೂರದಲ್ಲಿ ಬಸವಣ್ಣ ದೇವರ ರಥೋತ್ಸವ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಗೊಜನೂರ ಗ್ರಾಮದಲ್ಲಿ ಪ್ರತಿವರ್ಷದಂತೆ ಬಸವ ಜಯಂತಿ ಅಂಗವಾಗಿ ಬಸವಣ್ಣ ದೇವರ ರಥೋತ್ಸವವು ಸೋಮವಾರ ಸಂಜೆ ಅಪಾರ ಭಕ್ತ ಸಮೂಹದೊಂದಿಗೆ ಅದ್ದೂರಿಯಾಗಿ ಜರುಗಿತು.

ಗ್ರಾಮದ ಬಸವಣ್ಣ ದೇವಸ್ಥಾನದಿಂದ ಆರಂಭವಾದ ರಥೋತ್ಸವವು ಶಿಭಾರ ಗಟ್ಟಿಯ ಮೂಲಕ ಸಾಗಿ ಸರ್ಕಾರಿ ಪ್ರಾಥಮಿಕ ಶಾಲೆಯ ಹತ್ತಿರ ಇರುವ ಪಾದಗಟ್ಟಿಯವರೆಗೆ ಸಂಚರಿಸಿತು.

ಜಾತ್ರಾ ಮಹೋತ್ಸವದಲ್ಲಿ ಡೊಳ್ಳಿನ ಮಜಲು ಹಾಗೂ ಜಾಂಜ್ ಮೇಳದೊಂದಿಗೆ ನಂದಿಕೋಲು ಕುಣಿತದ ಮನಮೋಹಕ ದೃಶ್ಯಗಳು ಗಮನಸೆಳೆದವು. ಭಕ್ತರು ರಥ-ಕ್ಕೆ ಉತ್ತತ್ತಿ, ಬಾಳೆ ಹಣ್ಣು, ಮಾವಿನ ಹಣ್ಣುಗಳನ್ನು ಎಸೆದು ಸಂಭ್ರಮಿಸಿದರು.

"ಬಸವೇಶ್ವರ ಮಹಾರಾಜ್ ಕೀ ಜೈ", "ಹರಹರ ಮಹಾದೇವ" ಎಂಬ ಜಯಘೋಷಣೆಗಳೊಂದಿಗೆ ಭಕ್ತರು ರಥವನ್ನು ಭಕ್ತಿಭಾವದಿಂದ ಎಳೆದರು.

ಗ್ರಾಮದ ಶಿಭಾರ ಗಟ್ಟಿಯ ಹತ್ತಿರ ರಾತ್ರಿ ರಸಮಂಜರಿ ಹಾಗೂ ಹಾಸ್ಯ ಸಂಜೆ ಕಾರ್ಯಕ್ರಮಗಳು ಜರುಗಿದವು. ಈ ವೇಳೆ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನಿಸಲಾಯಿತು.

### ತಹಸೀಲ್ದಾರ್ ಕಚೇರಿಯಲ್ಲಿ ಬಸವೇಶ್ವರ ಜಯಂತಿ ಆಚರಣೆಯಲ್ಲಿ ಧನಂಜಯ ಮಾಲಗತ್ತಿ ಅಭಿಪ್ರಾಯ

# ಬಸವಣ್ಣನವರ ವಚನಗಳು ಅಜ್ಞಾನ ನಿವಾರಣೆಗೆ ದಾರಿದೀಪ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿಶ್ವಗುರು ಬಸವಣ್ಣನವರು ತಮ್ಮ ವಚನಗಳ ಮೂಲಕ ಸಮಾಜದಲ್ಲಿರುವ ಅಜ್ಞಾನ, ಅಂಧಕಾರ ಹಾಗೂ ಮೂಢನಂಬಿಕೆಗಳನ್ನು ಹೊಡೆದೂಡಿಸಿ ಮನುಕುಲಕ್ಕೆ ದಾರಿದೀಪವಾಗಿದ್ದಾರೆ ಎಂದು ತಹಸೀಲ್ದಾರ್ ಧನಂಜಯ ಮಾಲಗತ್ತಿ ಹೇಳಿದರು.

ಸೋಮವಾರ ತಹಸೀಲ್ದಾರ್ ಕಚೇರಿಯಲ್ಲಿ ನಡೆದ ಬಸವೇಶ್ವರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಸವಣ್ಣನವರ ವಚನಗಳು ಹಾಗೂ ತತ್ವಗಳನ್ನು ಪ್ರತಿಯೊಬ್ಬರೂ ಓದಿ ಅರ್ಥೈಸಿ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಅವರಿಗೆ ನಿಜವಾದ ಗೌರವ ಸಲ್ಲಿಸಿದಂತಾಗುತ್ತದೆ ಎಂದರು.



ಪ್ರತಿಯೊಬ್ಬರ ಜೀವನದಲ್ಲಿ ಅರಿವಿನ ಬೆಳಕು ಮೂಡಲು ಬಸವಣ್ಣನವರ ಚಿಂತನೆ ಮತ್ತು ವಚನಗಳ ಅಧ್ಯಯನ ಅಗತ್ಯವಾಗಿದೆ. ವಚನ ಸಾಹಿತ್ಯದ ಮೂಲಕ ಸಾಮಾಜಿಕ ಕ್ರಾಂತಿಗೆ ಕಾರಣರಾದ ಬಸವಣ್ಣನವರ ಜ್ಞಾನ ಭಂಡಾರ ವಿದೇಶಿಗರನ್ನೂ ಆಕರ್ಷಿಸಿದ್ದು, ಭಾರತೀಯರೂ ಅದಕ್ಕೆ ಹೆಚ್ಚಿನ ಮಹತ್ವ ನೀಡಬೇಕು ಎಂದು ಹೇಳಿದರು.

ಅನುಭವ ಮಂಟಪದ ಚಿಂತನೆಗಳು ಸಂವಿಧಾನ ರೂಪಿಕರಣಕ್ಕೂ ಪ್ರೇರಣೆಯಾಗಿದ್ದು, ಬಸವ ಶರಣರ ವಚನಗಳ ಸಾರದಡಿ ಬದುಕು ಸಾಗಿಸುವ ಅಗತ್ಯವಿದೆ. ಶರಣರ ಆಚರಣೆಗಳು ಒಂದು ಜಾತಿಗೆ ಸೀಮಿತವಾಗದೆ ಎಲ್ಲರೂ ಪಾಲ್ಗೊಳ್ಳುವಂತಾಗಬೇಕು ಎಂದು ಹೇಳಿದರು.

ಹಿರಿಯ ಸಾಹಿತಿ ಪೂರ್ಣಾಜಿ ಖರಾಟೆ, ರೈತ ಮುಖಂಡ ಬಸವರಾಜ ಬೆಂಡಿಗೇರಿ, ಪುರಸಭೆ ಮಾಜಿ ಸದಸ್ಯ ಪ್ರವೀಣ ಬಾಳಿಕಾಯಿ ಮಾತನಾಡಿ, ಬಸವಣ್ಣನವರು ಸಮಾನತೆ, ಮಾನವೀಯ ಮೌಲ್ಯಗಳು ಮತ್ತು ಕಾಯಕ ತತ್ವವನ್ನು ಸಾರಿದ ಮಹಾನ್ ಸಮಾಜ ಸುಧಾರಕರಾಗಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರೇಡ್-2 ತಹಸೀಲ್ದಾರ್ ಮಂಜುನಾಥ ಅಮಾಸಿ, ಪ್ರಶಾಂತ ಕಿಮಾಯಿ, ಕುಬೇರಪ್ಪ ಮಹಾಂತಶೆಟ್ಟರ, ಚಂಬಣ್ಣ ಬಾಳಿಕಾಯಿ, ಈರಣ್ಣ ಅಂಕಲಕೋಟಿ, ಎಂ.ಕೆ. ಕಳ್ಳಿಮಠ, ಸಿದ್ದನಗೌಡ ಬಳ್ಳೊಳ್ಳಿ, ಶಿವಯೋಗಿ ಅಂಕಲಕೋಟಿ, ಶರಣು ಗೋಡಿ, ಚನ್ನವೀರಪ್ಪ ದಾನಿ, ಟಾಕಪ್ಪ ಸಾತಪುತೆ, ವನಿತಾ ಚಿಕ್ಕನಗೌಡ್ರ, ಬಸವರಾಜ ಮೆಣಸಿನಕಾಯಿ, ಅನೀಲ ಮುಳಗುಂದ, ಎಸ್.ಬಿ. ಅಣ್ಣಿಗೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> "ಬಸವಣ್ಣನವರ ವಚನಗಳು ಅಜ್ಞಾನ ಮತ್ತು ಮೂಢನಂಬಿಕೆಗಳನ್ನು ದೂರ ಮಾಡಿ ಸಮಾಜಕ್ಕೆ ಬೆಳಕು ನೀಡುತ್ತವೆ."
>
> – **ಧನಂಜಯ ಮಾಲಗತ್ತಿ, ತಹಸೀಲ್ದಾರ್.**

### ಶ್ರೀಕಾಶಿವಿಶ್ವನಾಥ ದೇವಸ್ಥಾನದ ನೂತನ ಮಹಾದ್ವಾರ ಉದ್ಘಾಟನೆಯಲ್ಲಿ ಡಿ. ಆರ್. ಪಾಟೀಲ ಪ್ರಶಂಸೆ

# ಸಾಮೂಹಿಕ ಸಹಕಾರದಿಂದ ಮಹಾದ್ವಾರ ನಿರ್ಮಾಣ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವಾರ್ಡ್ ನಂ. 11ರಲ್ಲಿ ಶ್ರೀಕಾಶಿವಿಶ್ವನಾಥ ದೇವಸ್ಥಾನದ ನೂತನ ಮಹಾದ್ವಾರವನ್ನು ಮಾಜಿ ಶಾಸಕ ಡಿ.ಆರ್. ಪಾಟೀಲ ಅವರು ಉದ್ಘಾಟಿಸಿದರು.

ನಗರದ ಶ್ರೀಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯ ವತಿಯಿಂದ ನಿರ್ಮಿಸಲಾದ ಈ ಮಹಾದ್ವಾರದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಡಿ.ಆರ್. ಪಾಟೀಲ ಅವರು, ಸಮಿತಿಯು ದೇವಸ್ಥಾನದ ಅಭಿವೃದ್ಧಿಗಾಗಿ ಹಗಲಿರುಳು ಶ್ರಮಿಸುತ್ತಿರುವುದು ಶ್ಲಾಘನೀಯವಾಗಿದೆ ಎಂದರು.

ಯಾವುದೇ ಸರ್ಕಾರಿ ಸಹಾಯವಿಲ್ಲದೆ, ವಾರ್ಡ್‌ನ ಹಿರಿಯರು, ಮುಖಂಡರು ಹಾಗೂ ಭಕ್ತರು ಒಗ್ಗೂಡಿ ನೂತನ ಮಹಾದ್ವಾರ ನಿರ್ಮಾಣ ಕಾರ್ಯವನ್ನು ಯಶಸ್ವಿಗೊಳಿಸಿರುವುದು ಜಿಲ್ಲೆಯ ಮಟ್ಟದಲ್ಲಿ ಮಾದರಿಯಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಪಕ್ಷಭೇದ ಮರೆತು ಎಲ್ಲರೂ ಒಂದಾಗಿ ದೇವಸ್ಥಾನದ ▶▶ 3ನೇ ಪುಟಕ್ಕೆ

> "ಸರ್ಕಾರದ ಸಹಾಯವಿಲ್ಲದೆ ಜನರು ಒಗ್ಗೂಡಿ ದೇವಸ್ಥಾನದ ನೂತನ ಮಹಾದ್ವಾರ ನಿರ್ಮಿಸಿರುವುದು ಜಿಲ್ಲೆಯ ಮಟ್ಟದಲ್ಲಿ ಮಾದರಿಯಾಗಿದೆ."
>
> – **ಡಿ.ಆರ್. ಪಾಟೀಲ,** ಮಾಜಿ ಶಾಸಕ

### ಮುಂದಿನ ಮುಖ್ಯಮಂತ್ರಿ ಘೋಷಣೆಗಳ ನಡುವೆ ಲಕ್ಷ್ಮೇಶ್ವರದಲ್ಲಿ ಭರ್ಜರಿ ಸ್ವಾಗತ

# ಡಿ.ಕೆ. ಶಿವಕುಮಾರರಿಗೆ ಕಂಬಳಿ ಹೊದಿಸಿ ಕುರಿ ಕಾಣಿಕೆ

ಮಾರ್ಗಮಧ್ಯದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಹಾಗೂ ಸುನೀಲ ಮಹಾಂತಶೆಟ್ಟರ ಅವರು ಲಿಂ. ವೀರ ಗಂಗಾಧರ ಜಗದ್ಗುರುಗಳ ಭಾವಚಿತ್ರ ನೀಡಿ ಸನ್ಮಾನಿಸಿದರು. ಬಳಿಕ ಮಾಜಿ ಶಾಸಕರ ಪುತ್ರರಾದ ಪ್ರವೀಣ ಮತ್ತು ಶಂಕರ ಬಾಳಿಕಾಯಿ ಅವರು ಸನ್ಮಾನಿಸಿದರು.



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ತಮ್ಮ ಆರಾಧ್ಯ ದೈವ ಮುಕ್ತಿಮಂದಿರ ಧರ್ಮಕ್ಷೇತ್ರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ರಾಜಕೀಯ ಉತ್ಸಾಹ ತಾರಕಕ್ಕೇರಿದ ಘಟನೆ ನಡೆಯಿತು.

ಭಾನುವಾರ ಬೆಳಿಗ್ಗೆ 11 ಗಂಟೆಗೆ ಡಿ.ಕೆ. ಶಿವಕುಮಾರ ಅವರು ಲಕ್ಷ್ಮೇಶ್ವರ ಮೂಲಕ ಮುಕ್ತಿಮಂದಿರಕ್ಕೆ ಆಗಮಿಸುವ ಸುದ್ದಿ ಹರಡುತ್ತಿದ್ದಂತೆಯೇ ಅನೇಕ ರಾಜಕೀಯ ನಾಯಕರು ಹಾಗೂ ನೂರಾರು ಕಾರ್ಯಕರ್ತರು ಜಮಾಯಿಸಿದ್ದರು. ಬಿಸಿಲಿನ ನಡುವೆಯೂ ಕಾದು ನಿಂತಿದ್ದ ಕಾರ್ಯಕರ್ತರು, ಸುಮಾರು ಎರಡು ಗಂಟೆ ತಡವಾಗಿ ಬಂದ ಡಿ.ಕೆ. ಶಿವಕುಮಾರ ಅವರ ವಾಹನವನ್ನು ಸುತ್ತುವರಿದು ಅವರಿಗೆ ಜಯಘೋಷ ಕೂಗಿದರು.

ಡಿ.ಕೆ. ಶಿವಕುಮಾರ ಅಭಿಮಾನಿ ಬಳಗದ ಮುಖಂಡ ನೀಲಪ್ಪ ಶರಸೂರಿ ನೇತೃತ್ವದ ಹಾಲುಮತ ಸಮಾಜದವರು ಹಾಗೂ ಅಭಿಮಾನಿಗಳು ಅವರಿಗೆ ಬೃಹತ್ ಹೂಮಾಲೆ ಹಾಕಿ ಕಂಬಳಿ ಹೊದಿಸಿ ಕುರಿ ಮರಿಯನ್ನು ಕಾಣಿ-ಕೆಯಾಗಿಸಿ ಗೌರವಿಸಿದರು. ಈ ವೇಳೆ "ಮುಂದಿನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ" ಎಂಬ ಘೋಷಣೆಗಳು ಮೊಳಗಿದವು.

ಅನೇಕ ಕಾರ್ಯಕರ್ತರು ಹೂಮಾಲೆ ಹಾಕಲು, ಕೈಕುಲುಕಲು ಹಾಗೂ ಫೋಟೋ ತೆಗೆಯಲು ಮುಗಿಬಿದ್ದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಅವರ ನೇತೃತ್ವದಲ್ಲಿ ಪೊಲೀಸ್ ಪಡೆ ಸುರಕ್ಷತೆ ಒದಗಿಸಿ ಮುಕ್ತಿಮಂದಿರಕ್ಕೆ ತೆರಳಲು ವ್ಯವಸ್ಥೆ ಮಾಡಿತು.

ಈ ಸಂದರ್ಭದಲ್ಲಿ ಆನಂದಸ್ವಾಮಿ ಗಡ್ಡದೇವರಮಠ, ಕುಮಾರ ತೋಟದ, ಸೋಮಣ್ಣ ಬೆಟಗೇರಿ, ಈರಣ್ಣ ಅಂಕಲಕೋಟಿ, ರಾಜು ಓಲೇಕಾರ, ಸದಾನಂದ ನಂದೆಣ್ಣವರ, ಕಿರಣ ನವಲೆ, ಯಲ್ಲಪ್ಪ ತಳವಾರ, ವಿಜಯ ಹಳ್ಳಿ, ಲಕ್ಷ್ಮಣ ಲಮಾಣಿ, ದೇವಪ್ಪ ಲಮಾಣಿ, ತಿಪ್ಪಣ್ಣ ಸಂಶಿ, ಯಲ್ಲಪ್ಪ ಸೂರಣಗಿ, ಜಿ.ಆರ್. ಕೊಪ್ಪದ, ವಿಜಯ ಕರಡಿ, ಅಮರೇಶ ತೆಂಬದಮನಿ, ರಾಜು ಕಳ್ಳಿ, ಮುದಕಣ್ಣ ಗದ್ದಿ, ಮುತ್ತಣ್ಣ ಟೋಕಾಳಿ, ಹನಮಂತಪ್ಪ ಶರಸೂರಿ, ನೀಲಪ್ಪ ಪಡಗೇರಿ, ಸಿದ್ದು ದುರಗಣ್ಣವರ, ಅಣ್ಣಪ್ಪ ರಾಮಗೇರಿ, ನೀಲಪ್ಪಗೌಡ ಕರಿಯಪ್ಪಗೌಡ್ರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಶರಣ ಸಾಹಿತ್ಯವು ಸಾಮಾಜಿಕ ಸಮಾನತೆಯ ದಾರಿದೀಪ

## ನರೇಗಲ್ಲದಲ್ಲಿ ಬಸವೇಶ್ವರ ಜಯಂತಿ ಆಚರಣೆ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಬಸವಣ್ಣನವರ ನೇತೃತ್ವದಲ್ಲಿ 12ನೇ ಶತಮಾನದಲ್ಲಿ ಕಲ್ಯಾಣದಲ್ಲಿ ಉಗಮವಾದ ಶರಣ ಸಾಹಿತ್ಯವು ವಚನಗಳ ಮೂಲಕ ಸಾಮಾಜಿಕ ಸಮಾನತೆ, ಕಾಯಕ ನಿಷ್ಠೆ ಮತ್ತು ಮಾನವೀಯ ಮೌಲ್ಯಗಳನ್ನು ಸಾರಿದ ಮಹತ್ವದ ಸಾಹಿತ್ಯವಾಗಿದೆ ಎಂದು ನರೇಗಲ್ಲ ಹೋಬಳಿ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಎಂ.ಎಸ್. ಧಡೇಸೂರಮಠ ಹೇಳಿದರು.

ಪಟ್ಟಣದಲ್ಲಿ ಸೋಮವಾರ ನರೇಗಲ್ಲ ಹೋಬಳಿ ಶರಣ ಸಾಹಿತ್ಯ ಪರಿಷತ್ ವತಿಯಿಂದ ಹಮ್ಮಿಕೊಂಡಿದ್ದ ಬಸವೇಶ್ವರ ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು.

ಶರಣ ಸಾಹಿತ್ಯವು ಜಾತಿ ಮತ್ತು ಲಿಂಗ ತಾರತಮ್ಯವನ್ನು ವಿರೋಧಿಸಿ 'ಕಾಯಕವೇ ಕೈಲಾಸ' ಎಂಬ ತತ್ವದಡಿ ಸರಳ ಕನ್ನಡದಲ್ಲಿ ರಚಿತವಾದ ಅನುಭವ ಸಾಹಿತ್ಯವಾಗಿದೆ. ಅಲ್ಲಮಪ್ರಭು, ಅಕ್ಕಮಹಾದೇವಿ, ಚನ್ನಬಸವಣ್ಣ ಮುಂತಾದವರು ಪ್ರಮುಖ ವಚನಕಾರರಾಗಿದ್ದು, ಈ ಸಾಹಿತ್ಯವು ಕೇವಲ ಧಾರ್ಮಿಕವಾಗಿರದೆ ಒಂದು ದೊಡ್ಡ ಸಾಮಾಜಿಕ ಕ್ರಾಂತಿಯಾಗಿದೆ ಎಂದು ತಿಳಿಸಿದರು. ಇಂದಿನ ಆಧುನಿಕ ಸಮಾಜಕ್ಕೂ ಶರಣ ಸಾಹಿತ್ಯವು ಮಾರ್ಗದರ್ಶಕ ಬೆಳಕಾಗಿದ್ದು, ಶೋಷಣೆ ಮುಕ್ತ ಸಮಾಜದ ಕಲ್ಪನೆಯನ್ನು ನೀಡುತ್ತದೆ ಎಂದು ಹೇಳಿದರು. ಸಭೆಯಲ್ಲಿ ಹಿರಿಯ ನಾಗರೀಕರ ವೇದಿಕೆ ಅಧ್ಯಕ್ಷರಾದ ಡಿ.ಎ. ಅರವಟಿಗಿಮಠ, ಕೆ.ಎಸ್. ಕಳಕನ್ನವರ್, ಸುರೇಶ್ ಹಳ್ಳಿಕೇರಿ, ಎಸ್.ವಿ. ಜಕ್ಕಲಿ, ಬಿ.ಟಿ. ತಾಳಿ, ಬಿ.ಬಿ. ಕುರಿ, ಬಿ.ವಿ. ದೇಸಾಯಿ ಪಟ್ಟಿ, ಮಹೇಶ್ ದಡೇಸೂರ್‌ಮಠ, ಕಸ್ತೂರಿಬಾಯಿ ದನ್ನೂರು, ಭಾರತೀ ಶಿರ್ಸಿ, ಎಚ್.ಎಂ. ರತ್ನಮ್ಮ ಉಪಸ್ಥಿತರಿದ್ದರು.

# ಕುಡಿಯುವ ನೀರಿನ ತೊಂದರೆಯಾಗದಂತೆ ಕಟ್ಟುನಿಟ್ಟಾಗಿ ನಿಗಾವಹಿಸಿ

## ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯಲ್ಲಿ ಶಾಸಕ ಜಿ.ಎಸ್. ಪಾಟೀಲ ಸೂಚನೆ

> "ತಹಶೀಲ್ದಾರರ ನೇತೃತ್ವದಲ್ಲಿ ತಂಡ ರಚಿಸಿ ಗ್ರಾಮಸ್ಥರಿಗೆ ನೀರನ್ನು ಮಿತವಾಗಿ ಬಳಸುವ ಕುರಿತು ಜಾಗೃತಿ ಮೂಡಿಸಬೇಕು. ಯಾವುದೇ ಕಾರಣಕ್ಕೂ ಕೊಳವೆಬಾವಿ ತೋಡುವುದಕ್ಕೆ ಅನುಮತಿ ಇಲ್ಲ. ಲಭ್ಯವಿರುವ ನೀರನ್ನು ಸಮರ್ಪಕವಾಗಿ ಹಂಚಿಕೆ ಮಾಡುವ ಕ್ರಮ ಕೈಗೊಳ್ಳಬೇಕು"
>
> **– ಜಿ.ಎಸ್. ಪಾಟೀಲ, ಶಾಸಕ**




**■ವಿಜಯಸಾಕ್ಷಿ ಸುದ್ದಿ, ರೋಣ**

ಬೇಸಿಗೆ ಸಂದರ್ಭದಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸದೇ ನಗರ ಹಾಗೂ ಗ್ರಾಮೀಣ ಭಾಗಗಳಲ್ಲಿ ಕುಡಿಯುವ ನೀರಿನ ತೊಂದ–ರೆಯಾಗದಂತೆ ಕಟ್ಟುನಿಟ್ಟಾಗಿ ನಿಗಾವಹಿಸಬೇಕು ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕ ಜಿ.ಎಸ್. ಪಾಟೀಲ ಸೂಚಿಸಿದರು.

ತಾಲೂಕು ಪಂಚಾಯತ್ ಸಭಾಭವನದಲ್ಲಿ ಭಾನುವಾರ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಹು ಗ್ರಾಮ ಕುಡಿಯುವ ನೀರಿನ ಯೋಜನೆಗೆ ಸರ್ಕಾರ ಸಾವಿರಾರು ಕೋಟಿ ರೂ. ವೆಚ್ಚ ಮಾಡಿದ್ದರೂ, ಸಮರ್ಪಕವಾಗಿ ನೀರು ಪೂರೈಕೆಯಾಗುತ್ತಿಲ್ಲ ಎಂಬ ದೂರುಗಳು ಕೇಳಿ ಬರುತ್ತಿವೆ. ಡಿಬಿಒಟಿ ನಿರ್ವಹಣೆಗೆ ವರ್ಷಕ್ಕೆ 8 ಕೋಟಿ ರೂ. ಅನುದಾನ ನೀಡುತ್ತಿದ್ದರೂ ಸಮಸ್ಯೆ ಮುಂದುವರಿಯುತ್ತಿರುವುದು ಅಸಮಾಧಾನಕರ ಎಂದು ಅಧಿಕಾರಿಗಳನ್ನು ತರಾಟೆಗೆ ತೆ–ಗೆದುಕೊಂಡರು. ರೋಣ ತಾಲೂಕಿನ ಸವಡಿ, ಅಬ್ಬಿಗೇರಿ ಸೇರಿದಂತೆ ಹಲವು ಗ್ರಾಮಗಳಲ್ಲಿ ಅಗತ್ಯಕ್ಕೆ ತಕ್ಕಂತೆ ನೀರು ಲಭ್ಯವಾಗುತ್ತಿಲ್ಲ ಎಂಬ ವಿಷಯ ಪ್ರಸ್ತಾಪವಾಗುತ್ತಿದ್ದಂತೆ, ನಿಯಮಾನುಸಾರ ಪ್ರತಿ ವ್ಯಕ್ತಿಗೆ ದಿನಕ್ಕೆ 75 ಲೀಟರ್ ನೀರು ನೀಡಬೇಕಾಗಿದೆ. ಆದರೆ, ಡಿಬಿಒಟಿ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ಕಂಡುಬರುತ್ತಿದೆ. ಇದನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ತಾಪಂ ಇಒ ಚಂದ್ರಶೇಖರ ಕಂದಕೂರ ಮಾತನಾಡಿ, ಡಿಬಿಒಟಿ ಅಭಿಯಂತರರು ಅಗತ್ಯ ಪ್ರಮಾಣದಲ್ಲಿ ನೀರು ಪೂರೈಸದಿರುವುದು ಸಮಸ್ಯೆಗೆ ಕಾರಣವಾಗಿದೆ. ವಿಶೇಷವಾಗಿ ಅಬ್ಬಿಗೇರಿ ಗ್ರಾಮಕ್ಕೆ 6 ಲಕ್ಷ ಲೀಟರ್ ನೀರು ಪೂರೈಸಬೇಕಿದ್ದರೂ, ಕಡಿಮೆ ಪ್ರಮಾಣದಲ್ಲಿ ಮಾತ್ರ ನೀರು ಪೂರೈಕೆ ಆಗುತ್ತಿದೆ ಎಂದರು. ಡಿಬಿಒಟಿ ಅಭಿಯಂತರರು ಕೆಲವು ಗ್ರಾಮಗಳಲ್ಲಿ ಮುಖ್ಯ ಪೈಪ್‌ಲೈನ್ ಮೂಲಕ ಹೆಚ್ಚುವರಿ ನೀರು ಬಳಕೆಯಾಗುತ್ತಿರುವುದರಿಂದ ಇತರ ಗ್ರಾಮಗಳಿಗೆ ಪೂರೈಕೆ ಕಷ್ಟವಾಗುತ್ತಿದೆ ಎಂದು ಸ್ಪಷ್ಟಪಡಿಸಿದರು.

ಇದೇ ವೇಳೆ ಜಾನುವಾರುಗಳಿಗೆ ಮೇವು ಕೊರತೆಯಾಗದಂತೆ ಮುನ್ನೆಚ್ಚರಿಕೆ ವಹಿಸಲು ಸೂಚಿಸಿದ ಅವರು, ಪಶುವೈದ್ಯಾಧಿಕಾರಿ ಡಾ. ಕುರಹಟ್ಟಿ ನೀಡಿದ ಮಾಹಿತಿಯಂತೆ ಸುಮಾರು 46 ವಾರಗಳಿಗೆ ಸಾಲುವಷ್ಟು ಮೇವು ಸಂಗ್ರಹವಿದೆ ಎಂದು ತಿಳಿಸಲಾಯಿತು.

ಸಭೆಯಲ್ಲಿ ತಹಸೀಲ್ದಾರ್ ನಾಗರಾಜ ಕೆ ಸೇರಿದಂತೆ ಗಜೇಂದ್ರಗಡ, ಗದಗ, ಮುಂಡರಗಿ ತಾಲೂಕಿನ ತಹಶೀಲ್ದಾರರು, ತಾಪಂ ಇಒಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಪಿಡಿಒಗಳು ಉಪಸ್ಥಿತರಿದ್ದರು.

# ಗಂಜಿ ಬಸವೇಶ್ವರ ಜಾತ್ರೋತ್ಸವ ಭಾರತೀಯ ಪರಂಪರೆಯ ಪ್ರತಿಬಿಂಬ

## ಜಾತ್ರಾ ಮಹೋತ್ಸವದಲ್ಲಿ ಸದಾಶಿವಾನಂದ ಶ್ರೀಗಳ ಅಭಿಮತ



> "ಗಂಜಿ ಬಸವೇಶ್ವರ ಜಾತ್ರೋತ್ಸವವು ಭಾರತೀಯ ಸಂಸ್ಕೃತಿ, ಪರಂಪರೆ ಹಾಗೂ ಸೌಹಾರ್ದತೆಯನ್ನು ಜೀವಂತವಾಗಿಡುವ ಮಹೋತ್ಸವವಾಗಿದೆ."
>
> **– ಡಾ. ಅಭಿನವ ಸದಾಶಿವಾನಂದ ಮಹಾಸ್ವಾಮಿಗಳು.**

**■ವಿಜಯಸಾಕ್ಷಿ ಸುದ್ದಿ, ಗದಗ**

ಗಂಜಿ ಬಸವೇಶ್ವರ ಜಾತ್ರೋತ್ಸವವು ಭಾರತೀಯ ಪರಂಪರೆಯನ್ನು ನೆನಪಿಸುವ ಮಹತ್ವದ ಉತ್ಸವವಾಗಿದೆ ಎಂದು ಗದಗ ಶಿವಾನಂದ ಮಠದ ಜಗದ್ಗುರು ಮ.ನಿ.ಪ್ರ ಡಾ. ಅಭಿನವ ಸದಾಶಿವಾನಂದ ಮಹಾಸ್ವಾಮಿಗಳು ಹೇಳಿದರು.

ನಗರದ ಉಸುಗಿನಗಟ್ಟಿ ಓಣಿಯ ಶ್ರೀ ಗಂಜಿ ಬಸವೇಶ್ವರ 64ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಬಸವ ಮಂಟಪದಲ್ಲಿ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈ ಜಾತ್ರೋತ್ಸವವು ಸರ್ವಜನಾಂಗದ ಶಾಂತಿ, ಸೌಹಾರ್ದತೆ ಹಾಗೂ ಪರಂಪರೆಯ ಪ್ರತೀಕವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಒಂದು ಕಡೆ ಬಸವಣ್ಣನವರ ಜಯಂತಿ, ಮತ್ತೊಂದು ಕಡೆ ಏರೋ ರಾಮಾರಾಧ್ಯರ ಜಯಂತಿಯೊಂದಿಗೆ ಜಾತ್ರೋತ್ಸವವನ್ನು ಹಮ್ಮಿಕೊಂಡಿರುವುದು ವಿಶೇಷವಾಗಿದೆ. ಹಸುಗಳ ಪ್ರದರ್ಶನದ ಮೂಲಕ ಗೋ ಸಾಕಾಣಿಕೆಗೆ ಉತ್ತೇಜನ ನೀಡಲಾಗುತ್ತಿದ್ದು, ಎತ್ತುಗಳ ಓಟ ಸ್ಪರ್ಧೆಗಳ ಮೂಲಕ ರೈತರಿಗೆ ಪ್ರೋತ್ಸಾಹ ನೀಡಲಾಗುತ್ತಿದೆ ಎಂದರು. ನಿತ್ಯ ಧಾರ್ಮಿಕ ಸಭೆಗಳು ಹಾಗೂ ಜನಪದ ರಸಮಂಜರಿ ಕಾರ್ಯಕ್ರಮಗಳ ಮೂಲಕ ಸ್ಥಳೀಯರಿಗೆ ಮನರಂಜನೆ ಮತ್ತು ಸಾಂಸ್ಕೃತಿಕ ಅರಿವು ಮೂಡಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಯುವಕರು ಹಾಗೂ ಹಿರಿಯರು ಒಗ್ಗೂಡಿ ಜಾತ್ರೋತ್ಸವವನ್ನು ಯಶಸ್ವಿಯಾಗಿ ನಡೆಸುತ್ತಿರುವುದು ಇಡೀ ಗದಗ–ಬೆಟಗೇರಿ ಭಾಗ–ಕ್ಕೆ ಮಾದರಿಯಾಗಿದೆ ಎಂದು ಆಶೀರ್ವಚನ ನೀಡಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ನಿಂಗಪ್ಪ ಪಡಗದ ಅವರು ಮಾತನಾಡಿ, ವಿವಿಧ ಓಣಿಗಳ ಭಕ್ತರು ಒಗ್ಗೂಡಿ ಜಾತ್ರೋತ್ಸವವನ್ನು ಯಶಸ್ವಿಗೊಳಿಸುತ್ತಿರುವುದು ನಮ್ಮ ಬಲವಾಗಿದೆ ಎಂದರು.

ಅತಿಥಿಗಳಾಗಿ ಎಸ್.ವಿ. ಸಂಕನೂರ (ವಿಧಾನಪರಿಷತ್ ಸದಸ್ಯರು), ಬಿಜೆಪಿ ಜಿಲ್ಲಾ ಅಧ್ಯಕ್ಷ ರಾಜು ಕುರಡಗಿ, ಮೋಹನ ಮಾಳಶೆಟ್ಟಿ, ಎಂ.ಎಂ. ಹಿರೇಮಠ ಅವರು ಉಪಸ್ಥಿತರಿದ್ದು ಮಾತನಾಡಿದರು.

ಈ ಸಂದರ್ಭದಲ್ಲಿ ಸಮಾಜ ಸೇವಕರಾದ ನಾಗರಾಜ ಬಿ. ಹರಪನಹಳ್ಳಿ ಹಾಗೂ ಶಿಕ್ಷಕ ಸಂಘದ ಅಧ್ಯಕ್ಷ ಸಂಗಮೇಶ ಮಂಗಳಗುಡ್ಡ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ವಿನಾಯಕ ಮಾನ್ವಿ, ಈರಣ್ಣ ಕರಭಿಷ್ಟಿ, ಎಫ್.ವಿ. ಮರಿಗೌಡ್ರ, ರಮೇಶ ಸಂಕಣ್ಣವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಿ

## ವಿಜ್ಞಾನದಲ್ಲಿ ಆಸಕ್ತಿ ಬೆಳೆಸಿದರೆ ಭವಿಷ್ಯದಲ್ಲಿ ಸಾಧನೆ ಸಾಧ್ಯ: ಡಾ. ಎಸ್.ಬಿ. ಶೆಟ್ಟರ್



**■ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ವಿದ್ಯಾರ್ಥಿಗಳು ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಹೆಚ್ಚಿನ ಆಸಕ್ತಿ ಬೆಳೆಸಿಕೊಂಡರೆ ಭವಿಷ್ಯದಲ್ಲಿ ಉತ್ತಮ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಡಾ. ಎಸ್.ಬಿ. ಶೆಟ್ಟರ್ ಹೇಳಿದರು.

ಶಾಲಾ ಶಿಕ್ಷಣ ಇಲಾಖೆ ಹಾಗೂ ಭಾರತೀಯ ವೈದ್ಯಕೀಯ ಸಂಸ್ಥೆ (ಐಎಂಎ) ಗದಗ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಖಗೋಳ ವಿಸ್ಮಯ ಬೇಸಿಗೆ ಶಿಬಿರದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾಡಿದರು.

> "ವಿದ್ಯಾರ್ಥಿಗಳು ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಆಸಕ್ತಿ ಬೆಳೆಸಿಕೊಂಡರೆ ಮಾತ್ರ ಭವಿಷ್ಯದಲ್ಲಿ ದೊಡ್ಡ ಸಾಧನೆ ಮಾಡಲು ಸಾಧ್ಯ. ಖಗೋಳ ವಿಜ್ಞಾನವು ವಿಶ್ವದ ರಹಸ್ಯಗಳನ್ನು ತಿಳಿಯುವ ಮಹತ್ವದ ಕ್ಷೇತ್ರವಾಗಿದೆ."
>
> **– ಡಾ. ಎಸ್.ಬಿ. ಶೆಟ್ಟರ್**

ಖಗೋಳ ವಿಜ್ಞಾನವು ವಿಶ್ವದ ರಹಸ್ಯಗಳನ್ನು ಅರಿಯಲು ಅತ್ಯಂತ ಪ್ರಮುಖವಾದ ಕ್ಷೇತ್ರವಾಗಿದ್ದು, ಇಂತಹ ಶಿಬಿರಗಳು ಮಕ್ಕಳಲ್ಲಿ ವೈಜ್ಞಾನಿಕ ಚಿಂತನೆ ಹಾಗೂ ಕುತೂಹಲವನ್ನು ಉತ್ತೇಜಿಸುತ್ತವೆ ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಗದಗ ಜಿಲ್ಲೆಯ ವಿದ್ಯಾರ್ಥಿಗಳು ಯುವ ವಿಜ್ಞಾನಿಗಳಾಗಿ ಹೊರಹೊಮ್ಮಬೇಕು ಎಂಬ ಆಶಯ ವ್ಯಕ್ತಪಡಿಸಿದ ಅವರು, ಇಂತಹ ಕಾರ್ಯಕ್ರಮಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಕರೆ ನೀಡಿದರು.

ಶಿಬಿರದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ಉತ್ಸಾಹದಿಂದ ಖಗೋಳ ವಿಜ್ಞಾನದ ವಿವಿಧ ವಿಷಯಗಳನ್ನು ತಿಳಿದುಕೊಂಡರು. ಶಿಕ್ಷಕರು ಹಾಗೂ ಆಯೋಜಕರು ಇಂತಹ ಶಿಬಿರಗಳು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಮಹತ್ವದ ಪಾತ್ರವಹಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಅಧ್ಯಕ್ಷರಾದ ಬಿ.ಜಿ. ಅಣ್ಣಿಗೇರಿ ಸಂಸ್ಥೆಯ ಶಿವಕುಮಾರ ಪಾಟೀಲ, ರವಿಪ್ರಕಾಶ್ ರೆಡ್ಡಿ, ಎಸ್.ಹೆಚ್. ಬಂಡಿವಡ್ಡರ, ಎಂ.ಎಚ್. ಸವದತ್ತಿ, ಎಂ.ಎ. ಯರಗುಡಿ, ಶಾಮ್ ಲಾಂಡೆ ಹಾಗೂ ಬಸವರಾಜ್ ಉಪಸ್ಥಿತರಿದ್ದರು.

# ಪುಲಿಗೆರೆ ಶ್ರೀ ಸೋಮೇಶ್ವರ ಜಾತ್ರಾ ಮಹೋತ್ಸವಕ್ಕೆ ಚಾಲನೆ

## ಬಸವ ಜಯಂತಿ ಅಂಗವಾಗಿ ಕಳಸಾರೋಹಣ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಐತಿಹಾಸಿಕ ಪ್ರಸಿದ್ಧ ಲಕ್ಷೇಶ್ವರ ಆರಾಧ್ಯ ದೈವ ಪುಲಿಗೆರೆ ಶ್ರೀ ಸೋಮೇಶ್ವರ ಜಾತ್ರಾ ಮಹೋತ್ಸವ ಅಂಗವಾಗಿ ಸೋಮವಾರ ಬಸವ ಜಯಂತಿ ದಿನ ಕಳಶದ ಪೂಜೆಯೊಂದಿಗೆ ಕಳಸಾರೋಹಣ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀ ಸೋಮೇಶ್ವರ ಭಕ್ತ ಸೇವೆ ಕಮಿಟಿಯ ಅಧ್ಯಕ್ಷ ಗುರುರಾಜ ಪಾಟೀಲ ಕುಲಕರ್ಣಿ ಹಾಗೂ ಶ್ರೀ ಸೋಮೇಶ್ವರ ಜಾತ್ರಾ ಕಮಿಟಿ ಅಧ್ಯಕ್ಷ ಕುಬೇರಪ್ಪ ಮಹಾಂತಶೆಟ್ಟರ ಮಾತನಾಡಿ, ತಿರುಳ್ಗನ್ನಡ ನಾಡಿನ ಪುಲಿಗೆರೆ ಸೋಮೇಶ್ವರನಿಗೆ ಕನ್ನಡ ನಾಡಿನಲ್ಲಿ ಹಿರಿದಾದ ಸ್ಥಾನಮಾನವಿದೆ ಎಂದರು.



ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಗೊಳಪಟ್ಟ ಈ ಐತಿಹಾಸಿಕ ದೇವಸ್ಥಾನದ ಅಭಿವೃದ್ಧಿ ಕಾರ್ಯಗಳು ಹಂತಹಂತವಾಗಿ ನಡೆಯುತ್ತಿದ್ದು, ಪ್ರವಾಸೋದ್ಯಮ ಸಚಿವರ ಇಚ್ಛಾಶಕ್ತಿಯಿಂದ ಉತ್ತರ ದ್ವಾರದ ಅಭಿವೃದ್ಧಿ ಕಾರ್ಯ ಪ್ರಗತಿಯಲ್ಲಿದೆ ಎಂದು ತಿಳಿಸಿದರು. ನಾಡಿನುದ್ದಕ್ಕೂ ಅಪಾರ ಭಕ್ತರನ್ನು ಹೊಂದಿರುವ ಶ್ರೀ ಸೋಮೇಶ್ವರನ ಜಾತ್ರಾ ಮಹೋತ್ಸವ ಎಪ್ರಿಲ್ 25ರಿಂದ ಆರಂಭಗೊಳ್ಳಲಿದ್ದು, ಎಪ್ರಿಲ್ 25ರಂದು ಸಂಜೆ 6.30ಕ್ಕೆ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮದೊಂದಿಗೆ ರಥಪೂಜೆ ನಡೆಯಲಿದೆ. ಎಪ್ರಿಲ್ 26ರಂದು ಸಂಜೆ 6ಕ್ಕೆ ಶ್ರೀ ಸೋಮೇಶ್ವರ ಮಹಾರಥೋತ್ಸವ, ಎಪ್ರಿಲ್ 27ರಂದು ಕಡುಬಿನ ಕಾಳಗ, ಎಪ್ರಿಲ್ 28ರಂದು ರಾತ್ರಿ 8ಕ್ಕೆ ಓಕುಳಿ ಕಾರ್ಯಕ್ರಮ ನಡೆಯಲಿದೆ ಎಂದು ವಿವರಿಸಿದರು.

ಲಕ್ಷೇಶ್ವರ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ಈ ವೇಳೆ ಬಸವೇಶ ಮಹಾಂತಶೆಟ್ಟರ, ಚಂಬಣ್ಣ ಬಾಳಿಕಾಯಿ, ನಿಂಗಪ್ಪ ಜಾವೂರ, ಸಿದ್ದನಗೌಡ ಬಳ್ಳೊಳ್ಳಿ, ಸೋಮಣ್ಣ ಮುಳಗುಂದ, ಶಿವಯೋಗಿ ಅಂಕಲಕೋಟಿ, ನೀಲಪ್ಪ ಶರಸೂರಿ, ಸೋಮಣ್ಣ ತಂಡಿಗೇರ, ರಾಮಣ್ಣ ಗೌರಿ, ಪ್ರಕಾಶ ಮುಳಗುಂದ, ಸೋಮಣ್ಣ ಅಣ್ಣಿಗೇರಿ ಸೇರಿದಂತೆ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್, ಶ್ರೀ ಸೋಮೇಶ್ವರ ಅರ್ಚಕರ ಸೇವಾ ಸಮಿತಿ, ಪುರಾಣ ಸೇವಾ ಸಮಿತಿ ಸದಸ್ಯರು ಹಾಗೂ ಅರ್ಚಕರಾದ ಕೃಷ್ಣಾಜಿ ಪೂಜಾರ ಉಪಸ್ಥಿತರಿದ್ದರು.

# ಬಸವ ಸಿದ್ಧಾಂತ ಅಳವಡಿಸಿಕೊಂಡರೆ ಬದುಕು ಸಾರ್ಥಕ

## ಮುಳಗುಂದದಲ್ಲಿ ಬಸವ ಜಯಂತಿ ಆಚರಣೆ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ವಿಶ್ವಗುರು ಬಸವಣ್ಣನವರು ಸಾಮಾಜಿಕ ಕ್ರಾಂತಿಗೆ ನಾಂದಿ ಹಾಡಿದ ಮಹಾನ್ ಚಿಂತಕರಾಗಿದ್ದು, ಅವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಬದುಕು ಸಾರ್ಥಕವಾಗುತ್ತದೆ ಎಂದು ಕದಳಿ ವೇದಿಕೆ ಅಧ್ಯಕ್ಷೆ ರಾಜೇಶ್ವರಿ ಬಡ್ನಿ ಹೇಳಿದರು.

ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಗವಿಮಠದಲ್ಲಿ ಜಾತ್ರಾ ಸಮಿತಿ ವತಿಯಿಂದ ಹಮ್ಮಿಕೊಂಡ ಬಸವ ಜಯಂತಿ ಕಾರ್ಯಕ್ರಮದಲ್ಲಿ ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.


ಬಸವಣ್ಣನವರು ಸಮಾನತೆಗಾಗಿ ಶ್ರಮಿಸಿದ ದಾರ್ಶನಿಕರಾಗಿದ್ದು, ತಮ್ಮ ವಚನ ಸಾಹಿತ್ಯದ ಮೂಲಕ ಸಮಾಜದ ಅಸಮಾನತೆಗಳನ್ನು ತಿದ್ದಿದವರು. ಅವರ ತತ್ವ ಸಿದ್ಧಾಂತಗಳು ಇಂದಿಗೂ ಪ್ರಸ್ತುತವಾಗಿದ್ದು, ಅವುಗಳನ್ನು ನಮ್ಮ ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಾತ್ರಾ ಸಮಿತಿ ಅಧ್ಯಕ್ಷ ಗಂಗಪ್ಪ ಸುಂಕಾಪೂರ, ಡಾ. ಎಸ್.ಸಿ. ಚವಡಿ, ದೇವಪ್ಪ ಅಣ್ಣಿಗೇರಿ, ಕುಬೇರಪ್ಪ ಗಡಾದ, ಮಂಜುನಾಥ ಬಿಳೆಯಲಿ, ಬಸವರಾಜ ಬಾತಾಖಾನಿ, ಮಲ್ಲೇಶ ಲಾಳಿ, ಮಾಹಾಂತಪ್ಪ ಕೋರಿ, ರವಿ ಬಳಿಗೇರ, ರವಿ ನವಲಿ, ಮುತ್ತಪ್ಪ ಕುರಬಗೌಳಿ, ಮಧು ಕೋರಿ, ಸುಮನ್ ಚವಡಿ, ರಾಜೇಶ್ವರಿ ಬಡ್ನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.



# ಬಸವಣ್ಣರು ಶ್ರಮದ ಗೌರವ ಸಾರಿದ ಮಹಾನ್ ದಾರ್ಶನಿಕರು

## ರೆಡ್ಡಿ ಮಹಿಳಾ ಬಳಗದಿಂದ ಬಸವ ಜಯಂತಿ ಆಚರಣೆಯಲ್ಲಿ ಸುಮಾ ಶಿವನಗೌಡರ



**■ವಿಜಯಸಾಕ್ಷಿ ಸುದ್ದಿ, ಗದಗ**

ಬಸವಣ್ಣರು ಸಮಾಜದಲ್ಲಿ ಸಮಾನತೆ, ಮಹಿಳಾ ಸಬಲೀಕರಣ ಹಾಗೂ ಶ್ರಮದ ಗೌರವವನ್ನು ಪ್ರತಿಪಾದಿಸಿದ ಮಹಾನ್ ದಾರ್ಶನಿಕರಾಗಿದ್ದಾರೆ ಎಂದು ಶ್ರೀಮತಿ ಸುಮಾ ಶಿವನಗೌಡರ ಹೇಳಿದರು.

ಗದಗ ಭಿಷ್ಮಕೇರಿ ಸಮೀಪದ ಬಸವೇಶ್ವರ ಪ್ರತಿಮೆಯ ಬಳಿಯಲ್ಲಿ ರೆಡ್ಡಿ ಮಹಿಳಾ ಬಳಗದ ವತಿಯಿಂದ ನಡೆದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

"ಕಾಯಕವೇ ಕೈಲಾಸ" ಎಂಬ ಬಸವಣ್ಣನವರ ತತ್ವವು ಇಂದಿಗೂ ಎಲ್ಲರಿಗೂ ಮಾರ್ಗದರ್ಶಕವಾಗಿದ್ದು, ಅವರ ಜೀವನ ಮತ್ತು ಚಿಂತನೆಗಳು ಸಮಾಜಕ್ಕೆ ದಾರಿದೀಪವಾಗಿವೆ ಎಂದು ಹೇಳಿದರು.

ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಮಹಿಳೆಯರಿಂದ ವಚನ ಗಾಯನ ನಡೆಯಿತು. ಶ್ರೀಮತಿ ಗಂಗಾ ದೇಸಾಯಿ ಅವರು ಬಸವಣ್ಣನ ವಚನಗಳನ್ನು ಭಕ್ತಿಭಾವದಿಂದ ಹಾಡಿದರು. ಶ್ರೀಮತಿ ಶೋಭಾ ಬೆಂತೂರ್ ಮಾತನಾಡಿ, ಇಂತಹ ಕಾರ್ಯಕ್ರಮಗಳು ಆತ್ಮೀಯತೆ ಹಾಗೂ ಆಧ್ಯಾತ್ಮಿಕತೆಯನ್ನು ಹೆಚ್ಚಿಸುತ್ತವೆ ಎಂದರು. ಶ್ರೀಮತಿ ಶೋಭಾ ಭೂಮರೆಡ್ಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀಮತಿ ವೀಣಾ ತಿರ್ಲಾಪುರ್ ಸ್ವಾಗತಿಸಿದರು. ವಂದನಾರ್ಪಣೆಯನ್ನು ಶ್ರೀಮತಿ ಶೈಲಜಾ ಕವಲೂರ್ ನೆರವೇರಿಸಿದರು.

ಈ ಸಂದರ್ಭದಲ್ಲಿ ಶ್ರೀಮತಿ ಆಶಾ ಓದುಗೌಡರ, ಶ್ರೀಮತಿ ಲತಾ ಮುಂಬಾರೆಡ್ಡಿ, ಶ್ರೀಮತಿ ಜಯಾ ಕೆಂಚರೆಡ್ಡಿ, ಶ್ರೀಮತಿ ಪೂರ್ಣಿಮಾ ಪಾಟೀಲ, ಕುಮಾರಿ ಸುಷ್ಮಾ ಶಿವನಗೌಡರ ಸೇರಿದಂತೆ ಮಹಿಳಾ ಬಳಗದ ಸದಸ್ಯರು

**ಬಸವ ಜಯಂತಿ, ಅಂಬೇಡ್ಕರ್ ಜಯಂತಿ ಅಂಗವಾಗಿ ವಿಶೇಷ ಕಾರ್ಯಕ್ರಮ**

# ಸವಾಲ್-ಜವಾಬ್ ಭಜನಾ ಸ್ಪರ್ಧೆಗೆ ಸಜ್ಜು

■ವಿಜಯಸಾಕ್ಷಿ ಸುದ್ದಿ, ಮುಳಗುಂದ


ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ. 2ರಲ್ಲಿ ಎಪ್ರಿಲ್ 21 ಮಂಗಳವಾರ ಸಂಜೆ 6 ಗಂಟೆಗೆ ಬಸವ ಜಯಂತಿ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಅಂಗವಾಗಿ ಗಗನ ಪೌಂಡೇಶನ್ (ರಿ) ವತಿಯಿಂದ ಮೊದಲ ಬಾರಿಗೆ ಸವಾಲ್-ಜವಾಬ್ ಭಜನಾ ಸ್ಪರ್ಧೆ ಆಯೋಜಿಸಲಾಗಿದೆ.

ಈ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನವನ್ನು ಪಪಂ ಸದಸ್ಯ ಬಸವರಾಜ ಹಾರೋಗೇರಿ ನೀಡಲಿದ್ದು, ದ್ವಿತೀಯ ಬಹುಮಾನವನ್ನು ದುಂದೂರ ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಶ್ರೀನಿವಾಸ ದ್ಯಾವನೂರ ಪ್ರಾಯೋಜಿಸಿದ್ದಾರೆ. ಸಾಧಕರಿಗೆ ಹಾಗೂ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಉತ್ತಮ ಸಾಧನೆಗೈದ ವಿದ್ಯಾರ್ಥಿಗಳಿಗೆ ಸನ್ಮಾನವೂ ನಡೆಯಲಿದೆ.

ಮುಖ್ಯ ಅತಿಥಿಗಳಾಗಿ ಎಸ್.ಎಂ. ನೀಲಗುಂದ, ಎಂ.ಡಿ. ಬಟ್ಟೂರ, ಬಿ.ವಿ. ಸುಂಕಾಪೂರ, ಬಸವರಾಜ ಬಡ್ನಿ, ಎಸ್.ಸಿ. ಬಡ್ನಿ, ನಾಗರಾಜ ದೇಶಪಾಂಡೆ, ಕೆ.ಎಲ್. ಕರಿಗೌಡ್ರ, ಮಾಹಾಂತಪ್ಪ ನೀಲಗುಂದ, ಮಾಹಾದೇವಪ್ಪ ಬಟ್ಟೂರ, ಗುಳಪ್ಪ ಮಜ್ಜಿಗುಡ್ಡ, ಶಿವಾನಂದ ಹುಣಶಿಮರದ, ಮೋಹನ ಮದ್ದಿನ, ಮಂಜುನಾಥ ಬಾರಕೇರ ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ ಎಂದು ಗಗನ ಪೌಂಡೇಶನ್ ಅಧ್ಯಕ್ಷ ಬಸವರಾಜ ಹಾರೋಗೇರಿ ತಿಳಿಸಿದ್ದಾರೆ.

# ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಸಾಧ್ಯ

**ಡಿ.ಕೆ. ಶಿವಕುಮಾರಿಂದ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ವಿಶೇಷ ಪೂಜೆ, ರಾಜಕೀಯ ಪ್ರಶ್ನೆಗಳಿಗೆ ತಟಸ್ಥ ಉತ್ತರ**



> "ಎಷ್ಟೇ ಪ್ರಭಾವಶಾಲಿ ವ್ಯಕ್ತಿಯಾದರೂ ಮನಶಾಂತಿಗಾಗಿ ದೇವರು, ಧರ್ಮ ಹಾಗೂ ಗುರುಗಳ ಆಶೀರ್ವಾದ ಅಗತ್ಯ."
> – **ಡಿ.ಕೆ. ಶಿವಕುಮಾರ, ಡಿಸಿ ಎಮ್.**

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯ ಹಾಗೂ ದೇಶದಲ್ಲಿ ಉಂಟಾಗುತ್ತಿರುವ ಜಾತಿ-ಧರ್ಮಗಳ ನಡುವಿನ ಸಂಘರ್ಷಗಳ ನಡುವೆಯೂ ಧರ್ಮವೇ ಶಾಂತಿಯ ದಾರಿಯಾಗಿದ್ದು, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಸಾಧ್ಯ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹೇಳಿದರು.

ಭಾನುವಾರ ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಮುಕ್ತಿಮಂದಿರ ಧರ್ಮಕ್ಷೇತ್ರಕ್ಕೆ ಭೇಟಿ ನೀಡಿದ ಅವರು ತಮ್ಮ ಆರಾಧ್ಯ ದೈವ ಲಿಂ. ವೀರಗಂಗಾಧರ ಜಗದ್ಗುರುಗಳ ಕರ್ತೃ ಗದ್ದುಗೆಗೆ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದರು.

ಡಿ.ಕೆ. ಶಿವಕುಮಾರ ಅವರು ತಮ್ಮ ಪುತ್ರ ಆಕಾಶ ಹಾಗೂ ಆತ್ಮೀಯ ಬಳಗದೊಂದಿಗೆ ಶ್ರೀ ಕ್ಷೇತ್ರಕ್ಕೆ ಆಗಮಿಸಿ ಲಿಂ. ವೀರಗಂಗಾಧರ ಜಗದ್ಗುರುಗಳ (ಅಜ್ಜಯ್ಯ) ಕರ್ತೃ ಗದ್ದುಗೆಗೆ ಅಭಿಷೇಕ, ಅಷ್ಟೋತ್ತರ ಹಾಗೂ ಮಹಾಮಂಗಳಾರತಿ ನೆರವೇರಿಸಿದರು. ಬಳಿಕ ಕೆಲ ನಿಮಿಷ ಗದ್ದುಗೆ ಮುಂದೆ ಕುಳಿತು ಇಷ್ಟಾರ್ಥ ಸಿದ್ಧಿ ಹಾಗೂ ಸಂಕಷ್ಟ ನಿವಾರಣೆಗೆ ಭಕ್ತಿಭಾವದಿಂದ ಪ್ರಾರ್ಥಿಸಿದರು. ಈ ವೇಳೆ ಕೆಲ ಆಪ್ತರು, ಶ್ರೀಗಳು ಹಾಗೂ ಅರ್ಚಕರನ್ನು ಹೊರತುಪಡಿಸಿ ಇತರರಿಗೆ ಅವಕಾಶ ನೀಡಲಾಗಿರಲಿಲ್ಲ. ಪೂಜೆ, ದರ್ಶನದ ಬಳಿಕ ಶ್ರೀಮಠದ ಪ್ರಸಾದ ಸ್ವೀಕರಿಸಿದ ಅವರು, "ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ" ಎಂಬ ವಿಶ್ವಶಾಂತಿ ಮಂತ್ರ ಸಾರಿದ ರಂಭಾಪುರಿ ಪೀಠದ ಲಿಂ. ವೀರಗಂಗಾಧರ ಜಗದ್ಗುರುಗಳ ಪಾವನ ಕ್ಷೇತ್ರ ಇದಾಗಿದೆ ಎಂದು ಹೇಳಿದರು.

ಮುಕ್ತಿಮಂದಿರ ತನ್ನ ಶ್ರದ್ಧೆಯ ಕ್ಷೇತ್ರವಾಗಿದ್ದು, ಬಹುಕಾಲದಿಂದ ದರ್ಶನಕ್ಕೆ ಬರಬೇಕೆಂಬ ಆಸೆ ಈಗ ಸಾಕಾರಗೊಂಡಿದೆ ಎಂದು ತಿಳಿಸಿದರು. "ಎಷ್ಟೇ ಪ್ರಭಾವಶಾಲಿ ವ್ಯಕ್ತಿಯಾದರೂ ಮನಶಾಂತಿಗಾಗಿ ದೇವರು, ಧರ್ಮ ಹಾಗೂ ಗುರುಗಳ ಆಶೀರ್ವಾದ ಅಗತ್ಯ. ಭಕ್ತ ಮತ್ತು ಭಗವಂತನ ನಡುವೆ ಪವಿತ್ರ ಬಂಧ ಧರ್ಮಕ್ಷೇತ್ರದಲ್ಲಿ ರೂಪುಗೊಳ್ಳುತ್ತದೆ" ಎಂದು ಅಭಿಪ್ರಾಯಪಟ್ಟರು.

ರಾಜಕೀಯ ಪ್ರಶ್ನೆಗಳಿಗೆ ಪ್ರತಿಕ್ರಿಯಿಸದೆ, "ಈ ಸಂದರ್ಭದಲ್ಲಿ ರಾಜಕೀಯವಾಗಿ ಯಾವುದೇ ಪ್ರಶ್ನೆ ಕೇಳಬೇಡಿ. ಅಜ್ಜಯ್ಯನ ಇಚ್ಛೆಯಂತೆ ಮುಂದೇನಾಗುವುದೋ ಕಾದು ನೋಡೋಣ" ಎಂದು ಮಾರ್ಮಿಕವಾಗಿ ನುಡಿದರು.

ನಂತರ ಮುಕ್ತಿಮಂದಿರದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರೊಂದಿಗೆ ತ್ರಿಕೋಟಿ ಶಿವಲಿಂಗ ಸ್ಥಾಪನೆ ಪ್ರದೇಶ ಹಾಗೂ ಸಮುದಾಯ ಭವನ ವೀಕ್ಷಿಸಿ, ಧರ್ಮಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗೆ ಸಹಕಾರ ನೀಡುವುದಾಗಿ ಭರವಸೆ ನೀಡಿದರು. ಈ ಕುರಿತು ಮಾಹಿತಿ ನೀಡಿದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು, ಡಿ.ಕೆ. ಶಿವಕುಮಾರ ಅವರು ಲಿಂ. ವೀರಗಂಗಾಧರ ಜಗದ್ಗುರುಗಳ ಪರಮ ಭಕ್ತರಾಗಿದ್ದು, ಅವರ ಇಷ್ಟಾರ್ಥಗಳು ಗುರುಗಳ ಆಶೀರ್ವಾದದಿಂದ ಈಡೇರಲಿವೆ ಎಂದು ಹೇಳಿದರು.

ಈ ವೇಳೆ ಶಾಸಕರಾದ ಶ್ರೀನಿವಾಸ ಮಾನೆ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಆನಂದಸ್ವಾಮಿ ಗಡ್ಡದೇವರಮಠ, ಟಿ. ಈಶ್ವರ, ಕೆ.ಪಿ. ನಂಜುಂಡಿ, ಗುರುನಾಥ ದಾನಪ್ಪನವರ, ಲಕ್ಷ್ಮಣಗೌಡ ಪಾಟೀಲ, ಎಸ್.ಪಿ. ಬಳಿಗಾರ, ರಜತ ಉಳ್ಳಾಗಡ್ಡಿಮಠ, ಸುಜಾತಾ ದೊಡ್ಡಮನಿ, ಜಯಕ್ಕ ಕಳ್ಳಿ, ಜಿ.ಆರ್. ಕೊಪ್ಪದ, ಪದ್ಮರಾಜ ಪಾಟೀಲ, ನಾಗರಾಜ ಮಡಿವಾಳರ, ಸೋಮಣ್ಣ ಬೆಟಗೇರಿ, ರಾಜುಗೌಡ ಪಾಟೀಲ, ದಾದಾಪೀರ ಮುಚ್ಚಾಲೆ, ಎಸ್.ಕೆ. ಹವಾಲ್ದಾರ, ವೀರಯ್ಯ ಮಠಪತಿ, ಶರಣು ಗೋಡಿ, ಹರೀಶ ಲಕ್ಷ್ಮೇಶ್ವರ, ರಾಜು ಕುಂಬಿ, ಫಕ್ಕಿರೇಶ ಮಾಟಣ್ಣವರ, ವಾಗೀಶಸ್ವಾಮಿ ಮಲೇಬೆನ್ನೂರ ಸೇರಿದಂತೆ ಡಿ.ಕೆ. ಶಿವಕುಮಾರ ಅಭಿಮಾನಿ ಬಳಗ, ಕಾಂಗ್ರೆಸ್ ನಾಯಕರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸರ್ಕಾರದ ಬಳಿ ಅನುದಾನದ ಕೊರತೆಯಿಲ್ಲ

**ರೋಣದಲ್ಲಿ ವಿವಿಧ ಸಮುದಾಯ ಭವನಗಳಿಗೆ ಶಾಸಕ ಜಿ. ಎಸ್. ಪಾಟೀಲ ಭೂಮಿಪೂಜೆ**



> "ಸರ್ಕಾರ ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿ ಕಾಮಗಾರಿಗಳನ್ನು ಯಶಸ್ವಿಯಾಗಿ ಕೈಗೊಳ್ಳುತ್ತಿದೆ. ಅನುದಾನದ ಕೊರತೆ ಎಂಬ ಆರೋಪಕ್ಕೆ ಯಾವುದೇ ಆಧಾರವಿಲ್ಲ" ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

■ವಿಜಯಸಾಕ್ಷಿ ಸುದ್ದಿ, ರೋಣ

ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳೊಂದಿಗೆ ಅಭಿವೃದ್ಧಿ ಕಾರ್ಯಗಳನ್ನು ಸಮರ್ಪಕವಾಗಿ ನಡೆಸುತ್ತಿದ್ದು, ಸರ್ಕಾರದ ಬಳಿ ಅನುದಾನದ ಕೊರತೆಯಿಲ್ಲ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಪಟ್ಟಣದಲ್ಲಿ ರವಿವಾರ 2 ಕೋಟಿ ರೂ. ವೆಚ್ಚದ ಡಾ. ಬಾಬು ಜಗಜೀವನರಾಮ ಸಮುದಾಯ ಭವನ, 1 ಕೋಟಿ ರೂ. ವೆಚ್ಚದ ಡಾ. ಬಿ.ಆರ್. ಅಂಬೇಡ್ಕರ್ ಸಮುದಾಯ ಭವನ ಹಾಗೂ 1 ಕೋಟಿ ರೂ. ವೆಚ್ಚದ ಮಹರ್ಷಿ ವಾಲ್ಮೀಕಿ ಸಮುದಾಯ ಭವನ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಕಾರ್ಮಿಕರ ಮಕ್ಕಳಿಗೆ ಉತ್ತಮ ಶಿಕ್ಷಣ ಒದಗಿಸಲು 38 ಕೋಟಿ ರೂ. ವೆಚ್ಚದಲ್ಲಿ ವಸತಿ ಶಾಲೆ ನಿರ್ಮಾಣ ನಡೆಯುತ್ತಿದ್ದು, 50 ಕೋಟಿ ರೂ. ವೆಚ್ಚದ ಜೆಟಿಟಿಸಿ ಕಾಲೇಜು ಕಟ್ಟಡ ಕಾಮಗಾರಿ ಅಂತಿಮ ಹಂತದಲ್ಲಿದೆ ಎಂದು ತಿಳಿಸಿದರು. ಕ್ಷೇತ್ರದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದರು. ಗಜೇಂದ್ರಗಡದಲ್ಲಿ ವಾಲ್ಮೀಕಿ ಭವನ ನಿರ್ಮಾಣಕ್ಕೆ 2 ಕೋಟಿ ರೂ. ಅನುದಾನ ಮಂಜೂರಾಗಿದ್ದು, ಶೀಘ್ರದಲ್ಲೇ ಭೂಮಿಪೂಜೆ ನೆರವೇರಿಸಲಾಗುವುದು. ಗ್ರಾಮೀಣ ಪ್ರದೇಶಗಳಲ್ಲಿಯೂ ಸಮುದಾಯ ಭವನ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಕಾಂಗ್ರೆಸ್ ಪಕ್ಷ ಸಂವಿಧಾನದ ಮೇಲೆ ನಂಬಿಕೆ ಇಟ್ಟಿರುವ ಪಕ್ಷವಾಗಿದ್ದು, ದೇಶದ ಏಕತೆ ಮತ್ತು ಸಹೋದರತೆಯನ್ನು ಕಾಪಾಡುವುದು ನಮ್ಮ ಜವಾಬ್ದಾರಿ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ವೀರಣ್ಣ ಶೆಟ್ಟರ, ವಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ, ಬಸವರಾಜ ಕಡೆಮನಿ, ಹನ್ಮಂತಪ್ಪ ದ್ವಾಸಲ ಸೇರಿದಂತೆ ಅನೇಕ ಮುಖಂಡರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೃಷ್ಣಗೌಡ ಪಾಟೀಲ ಜನ್ಮದಿನ ಆಚರಣೆ

**ಅಂಗನವಾಡಿ ಮಕ್ಕಳಿಗೆ ನೋಟ್ ಬುಕ್, ಪೆನ್ ವಿತರಣೆ- ಪ್ರತಿಭಾವಂತರಿಗೆ ಸನ್ಮಾನ**



> "ಹುಟ್ಟುಹಬ್ಬವನ್ನು ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಆಚರಿಸುವುದು ನಮ್ಮ ಉದ್ದೇಶ. ಮಕ್ಕಳ ಶಿಕ್ಷಣಕ್ಕೆ ಸಹಾಯವಾಗುವ ಕಾರ್ಯಗಳಿಗೆ ಆದ್ಯತೆ ನೀಡುತ್ತೇವೆ."
> – **ಮಲ್ಲಿಕಾರ್ಜುನ ಸಂಗಾಪುರ,** ಸೇವಾ ತಂಡದ ಕ್ಯಾಪ್ಟನ್.

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರಾದ ಕೃಷ್ಣಗೌಡ ಎಚ್. ಪಾಟೀಲ ಅವರ ಹುಟ್ಟುಹಬ್ಬದ ನಿಮಿತ್ತ, ನಗರದ ತಳಗೇರಿ ಓಣಿ (ಡಿ.ಸಿ. ಮಿಲ್), ವಾರ್ಡ್ ನಂ. 16ರಲ್ಲಿ ಅಂಗನವಾಡಿ ಮಕ್ಕಳಿಗೆ ಶಿಕ್ಷಣ ಸಾಮಗ್ರಿಗಳನ್ನು ವಿತರಿಸಲಾಯಿತು.

ಎಚ್.ಕೆ. ಪಾಟೀಲ ಸೇವಾ ತಂಡದ ಕ್ಯಾಪ್ಟನ್ ಮಲ್ಲಿಕಾರ್ಜುನ ಸಂಗಾಪುರ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕೃಷ್ಣಗೌಡ ಎಚ್. ಪಾಟೀಲ ಅವರು, ಪ್ರತಿವರ್ಷದಂತೆ ಈ ವರ್ಷವೂ ವಿನೂತನ ರೀತಿಯಲ್ಲಿ ಮಕ್ಕಳಿಗೆ ಉಪಯುಕ್ತವಾದ ನೋಟ್ ಬುಕ್, ಪೆನ್ನು, ಅಂಕಲಿಪಿ ಹಾಗೂ ಇತರ ಸಾಮಗ್ರಿಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಪಿಯುಸಿ ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಮಲ್ಲಿಕಾರ್ಜುನ ಸಂಗಾಪುರ, ಕೃಷ್ಣಗೌಡ ಎಚ್. ಪಾಟೀಲ ಅವರ ಮಾರ್ಗದರ್ಶನದಂತೆ ಪ್ರತಿವರ್ಷವೂ ಹುಟ್ಟುಹಬ್ಬವನ್ನು ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಆಚರಿಸಲಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕೃಷ್ಣಗೌಡ ಎಚ್. ಪಾಟೀಲ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಪರಶುರಾಮ್ ತಳಗೇರಿ, ವಿಜಯ ಕಲ್ಮನಿ, ಎಸ್. ಎನ್. ಬಳ್ಳಾರಿ, ನಗರಸಭೆ ಸದಸ್ಯರಾದ ಕೃಷ್ಣಾ ಪರಾಪೂರ, ಈರಪ್ಪ ಕೊಟ್ನಿಕಲ್, ವಿರುಪಾಕ್ಷಿ ಪರಾಪೂರ, ಅಶೋಕ ಮಂದಾಲಿ, ಅನ್ವರ್ ನದಾಫ ಸೇರಿದಂತೆ ಹಲವಾರು ಮುಖಂಡರು, ಯುವಕರು, ಮಹಿಳೆಯರು ಹಾಗೂ ಮಕ್ಕಳು ಉಪಸ್ಥಿತರಿದ್ದರು.

# ಕವಿಗಳ ಮಹಾಕವಿ ವಾಲ್ಮೀಕಿ: ಅನ್ನಪೂರ್ಣಾ ಸುಂಕದ




■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ತ್ರೇತಾಯುಗದಲ್ಲಿ ರಾಮಾಯಣ ರಚನೆಯ ಮೂಲಕ ಮಾನವ ಜೀವನಕ್ಕೆ ದಾರಿದೀಪವಾದ ಮಹರ್ಷಿ ವಾಲ್ಮೀಕಿಯನ್ನು ಕವಿಗಳ ಮಹಾಕವಿ ಎಂದು ಕರೆಯಲಾಗುತ್ತದೆ ಎಂದು ನಿವೃತ್ತ ಶಿಕ್ಷಕಿ ಅನ್ನಪೂರ್ಣಾ ಸುಂಕದ ಹೇಳಿದರು.

ಪಟ್ಟಣದ ಹಿರೇಮಠ ಸಭಾಭವನದಲ್ಲಿ ಶನಿವಾರ ಸಂಜೆ ನಡೆದ ಬೀಚಿ ಬಳಗದ ಮಾಸಿಕ ಸಭೆಯಲ್ಲಿ ಮಹರ್ಷಿ ವಾಲ್ಮೀಕಿ ಕುರಿತು ವಿಶೇಷ ಉಪನ್ಯಾಸ ನೀಡಿದ ಅವರು, ವಾಲ್ಮೀಕಿಯಾಗುವ ಮೊದಲು ಬೇಟೆಗಾರನಾಗಿದ್ದ ರತ್ನಾಕರನು ನಾರದ ಮಹರ್ಷಿಗಳ ಸಂಸರ್ಗದಿಂದ ಮಹಾಕವಿಯಾಗಿ ಪರಿವರ್ತನೆಯಾದದ್ದು ಮಾನವ ಜೀವನಕ್ಕೆ ಮಹತ್ವದ ಸಂದೇಶ ನೀಡುತ್ತದೆ ಎಂದರು.

ರಾಮಾಯಣ ಮತ್ತು ಮಹಾಭಾರತಗಳು ನಮ್ಮ ಸಂಸ್ಕೃತಿಯ ಎರಡು ಕಣ್ಣುಗಳಾಗಿವೆ. ರಾಮಾಯಣವು ಜೀವನದಲ್ಲಿ ಬರುವ ವಿವಿಧ ಸಂಬಂಧಗಳನ್ನು ಹೇಗೆ ನಿರ್ವಹಿಸಬೇಕು ಎಂಬುದನ್ನು ತಿಳಿಸುವ ಮಹತ್ವದ ಕಾವ್ಯವಾಗಿದೆ. ಇಂತಹ ಅಮೂಲ್ಯ ಕೃತಿಯನ್ನು ರಚಿಸಿದ ವಾಲ್ಮೀಕಿ ಮಹಾಕವಿ ಸ್ಥಾನಕ್ಕೆ ಏರಿದ್ದಾರೆ ಎಂದು ಹೇಳಿದರು.

ರಾಮಾಯಣದ ಶ್ಲೋಕಗಳು ಮನುಷ್ಯನ ದುಃಖವನ್ನು ನಿವಾರಿಸುವ ಉದ್ದೇಶದಿಂದ ರಚನೆಯಾಗಿದ್ದು, ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಶಾಂತ ಮತ್ತು ಸಮತೋಲನದ ಬದುಕು ಸಾಗಿಸಲು ಸಾಧ್ಯವಾಗುತ್ತದೆ. ಮಹಾಕಾವ್ಯಗಳು ಮಾನವೀಯ ಮೌಲ್ಯಗಳನ್ನು ಸಾರುವಲ್ಲಿ ಮಹತ್ತರ ಪಾತ್ರ ವಹಿಸುತ್ತವೆ ಎಂದು ತಿಳಿಸಿದರು.

ಪಾಪಭೀತಿ, ಸಂಘನೀತಿ ಹಾಗೂ ದೈವಭಕ್ತಿಯನ್ನು ಅಳವಡಿಸಿಕೊಂಡು ವಾಲ್ಮೀಕಿ ಮಹರ್ಷಿಯಾಗಿದ್ದು, ಮಕ್ಕಳಿಗೆ ಬಾಲ್ಯದಲ್ಲಿಯೇ ರಾಮಾಯಣದ ಸಾರವನ್ನು ತಿಳಿಸಿದರೆ ಅವರಲ್ಲಿ ಸಂಸ್ಕಾರ ಮತ್ತು ಸಂಸ್ಕೃತಿ ಬೆಳೆಸಲು ಸಹಾಯಕವಾಗುತ್ತದೆ ಎಂದರು. ಇಂತಹ ಉಪನ್ಯಾಸಗಳ ಮೂಲಕ ಸಾಹಿತ್ಯಿಕ ವಾತಾವರಣವನ್ನು ನಿರ್ಮಿಸುತ್ತಿರುವ ಬೀಚಿ ಬಳಗದ ಕಾರ್ಯ ಶ್ಲಾಘನೀಯ ಎಂದರು.

ಸಭೆಯಲ್ಲಿ ನಿಕಟಪೂರ್ವ ಅಧ್ಯಕ್ಷ ಕೆ.ಎಸ್. ಕಳಕಣ್ಣವರ, ಕಾರ್ಯದರ್ಶಿ ಭಾರತಿ ಶಿರ್ಸಿ ಮಾತನಾಡಿದರು. ಸಂಚಾಲಕ ಜೆ.ಎ. ಪಾಟೀಲ ವೇದಿಕೆಯ ಮೇಲಿದ್ದರು. ಬಳಗದ ಅಧ್ಯಕ್ಷ ಶಿವಯೋಗಿ ಜಕ್ಕಲಿ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಬಸಪ್ಪ ಉಪ್ಪಿನ, ಕಾಶೀನಾಥ ಸಾಲಿಮಠ, ಡಾ. ರಾಜೇಂದ್ರ ಗಚ್ಚಿನಮಠ, ವೀರಭದ್ರಪ್ಪ ಕೆರಿಯವರ, ಭರಮಪ್ಪ ತಾಳಿ, ಶಿವಾನಂದ ಗೋಗೇರಿ, ಸಂಗಯ್ಯ ಪ್ರಭುಸ್ವಾಮಿಮಠ, ಎ.ಎಸ್. ಅಣಗೌಡ್ರ, ಡಿ.ಎಸ್. ಪಾಟೀಲ, ಎನ್.ಎಫ್. ಹುಯಿಲಗೋಳ, ಪಿ.ಎ. ಹಡಪದ, ಎಂ.ಎಸ್. ಧಡೇಸೂರಮಠ, ವಿ.ಎ. ದೇಸಾಯಿ, ಡಾ. ಎಲ್.ಎಸ್. ಗೌರಿಮಠ, ಈಶ್ವರ ಬೆಟಗೇರಿ, ಎಲ್.ಕೆ. ಕಮ್ಮಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಾಮೂಹಿಕ ಸಹಕಾರದಿಂದ ಮಹಾದ್ವಾರ ನಿರ್ಮಾಣ

▸▸ಮೊದಲನೇ ಪುಟದಿಂದ

ಅಭಿವೃದ್ಧಿಗೆ ಶ್ರಮಿಸುತ್ತಿರುವುದು ಶ್ಲಾಘನೀಯವಾಗಿದ್ದು, ಮುಂದಿನ ದಿನಗಳಲ್ಲಿ ಶಾಸಕರ ಅನುದಾನದಿಂದ ಸಹಾಯ ಮಾಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು.


ಕಾರ್ಯಕ್ರಮದಲ್ಲಿ ಎಲ್.ಡಿ. ಚಂದಾವರಿ, ವಿ.ಟಿ. ನರೇಗಲ್, ವಿ.ಕೆ. ಗುರುಮಠ, ಶಂಕರ ಹಾನಗಲ್, ಆರ್.ಆರ್. ಕಾಶಪ್ಪನವರ, ಕೆ.ಪಿ. ಗುಳಗೌಡರ, ಸುದರ್ಶನ ಹಾನಗಲ್, ಎಸ್.ಎಸ್. ಪಾಳೇಗಾರ ಸೇರಿದಂತೆ ಸಮಿತಿಯ ಪದಾಧಿಕಾರಿಗಳು, ಭಕ್ತರು ಹಾಗೂ ವಾರ್ಡ್‌ನ ನಾಗರಿಕರು ಉಪಸ್ಥಿತರಿದ್ದರು.



ಲಕ್ಷ್ಮೇಶ್ವರ: ವಕೀಲರ ಸಂಘದಿಂದ ಜಗಜ್ಯೋತಿ ಬಸವಣ್ಣನವರ ಜಯಂತ್ಯುತ್ಸವವನ್ನು ಆಚರಿಸಲಾಯಿತು. ಹಿರಿಯ ವಕೀಲರಾದ ಎಸ್.ಪಿ ಬಳಿಗಾರ, ಬಿ.ಎಸ್ ಬಾಳೇಶ್ವರಮಠ, ಮಹೇಶ ಹಾರೋಗೇರಿ, ಬಿ.ಎಸ್ ಪಾಟೀಲ, ವಿ.ಎಸ್ ಪಶುಪತಿಹಾಳ, ಎನ್.ಎಂ ಗದಗ, ಪಿ.ಎಂ ವಾಲಿ ಸೇರಿ ಅನೇಕರಿದ್ದರು.

# ನಿಧನ

## ಬಸವರಡ್ಡೆಪ್ಪ ರಡ್ಡೇರ



**ನರೇಗಲ್ಲ:** ಸಮೀಪದ ಕೋಚಲಾಪೂರ ಗ್ರಾಮದ ನಿವಾಸಿ ಬಸವರಡ್ಡೆಪ್ಪ ಹನಮರಡ್ಡೆಪ್ಪ ರಡ್ಡೇರ(83) ಸೋಮವಾರ ನಿಧನ ಹೊಂದಿದರು.

ಮೃತರಿಗೆ ಓರ್ವ ಪುತ್ರ, ಪುತ್ರಿ ಇದ್ದಾರೆ.

# ಡಂಬಳದಲ್ಲಿ ಜೋಡೆತ್ತುಗಳ ವೈಭವದ ಮೆರವಣಿಗೆ

**ಓಕಳಿ ಬಂಡಿಯಲ್ಲಿ ಆಂಜನೇಯ ಭಾವಚಿತ್ರ – ಬಸವ ಜಯಂತಿ ಸಂಭ್ರಮ**



■ವಿಜಯಸಾಕ್ಷಿ ಸುದ್ದಿ, ಡಂಬಳ

ಬಸವ ಜಯಂತಿಯ ಅಂಗವಾಗಿ ಡಂಬಳ ಗ್ರಾಮದಲ್ಲಿ ಓಕಳಿ ಬಂಡಿಯಲ್ಲಿ ಆಂಜನೇಯ ಭಾವಚಿತ್ರವನ್ನು ಅಲಂಕರಿಸಿ ಜೋಡೆತ್ತುಗಳ ವೈಭವದ ಮೆರವಣಿಗೆ ಸೋಮವಾರ ಅದ್ದೂರಿಯಾಗಿ ನಡೆಯಿತು.

ಗ್ರಾಮದ ಹಾಲುಮತ ಸಮಾಜ ಹಾಗೂ ಎಲ್ಲಾ ಸಮುದಾಯದ ಹಿರಿಯರು ಮತ್ತು ಯುವಕರ ಆಶ್ರಯದಲ್ಲಿ ನಡೆದ ಮೆರವಣಿಗೆಯಲ್ಲಿ ರೈತರು ಸಂಭ್ರಮದಿಂದ ತಮ್ಮ ಜೋಡೆತ್ತುಗಳನ್ನು ಅಲಂಕರಿಸಿ ಭಾಗವಹಿಸಿದರು.

ಎತ್ತು, ಹೋರಿ ಹಾಗೂ ಆಕಳುಗಳಿಗೆ ಹುರಿಗೆಜ್ಜೆ, ಕಿರುಗಂಟೆಗಳ ಸರಗಳನ್ನು ಹಾಕಿ ಸಿಂಗಾರ ಮಾಡಲಾಗಿತ್ತು. ಗಳೆ, ನೊಗ, ಗಾಡಿ, ಹಗ್ಗ, ಪಲಗ, ದಿಂಡು ಸೇರಿದಂತೆ ಕೃಷಿ ಉಪಕರಣಗಳನ್ನು ಸಜ್ಜುಗೊಳಿಸಿ ಪೂಜೆ ಸಲ್ಲಿಸಲಾಯಿತು.

ನಸುಕಿನ ಜಾವದಲ್ಲೇ ರೈತರು ತಮ್ಮ ಎತ್ತು-ಗೋವುಗಳಿಗೆ ಸ್ನಾನ ಮಾಡಿಸಿ, ಮತಾಟಿ, ಮಗಡಾ, ಹಣಿಕಟ್ಟು, ಗೊಂಡ್ಯಾ, ಕೊರಳ ಪಟ್ಟಿ, ಮಿಂಚು ಪಟ್ಟಿ ಸೇರಿದಂತೆ ವಿವಿಧ ವರ್ಣರಂಜಿತ ಅಲಂಕಾರಗಳಿಂದ ಸಿಂಗರಿಸಿದರು.

ಶ್ರೀ ಹಾಲೇಶ್ವರ ಗದ್ದುಗೆಯಿಂದ ಆರಂಭವಾದ ಮೆರವಣಿಗೆ ವಿವಿಧ ವಾದ್ಯಗಳೊಂದಿಗೆ ಗ್ರಾಮದ ಮುಖ್ಯ ಬೀದಿಗಳಲ್ಲಿ ಸಂಚರಿಸಿ, ಗ್ರಾಮದ ಆರಾಧ್ಯ ದೇವರಾದ ಆಂಜನೇಯ ದೇವಸ್ಥಾನಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಲಾಯಿತು.

ನಂತರ ಹಾಲೇಶ್ವರ ಗದ್ದುಗೆಯ ಆವರಣದಲ್ಲಿ ಗೋದಿ ಹುಗ್ಗಿ ಅನ್ನಸಂತರ್ಪಣೆ ನಡೆಯಿತು.

ಈ ಸಂದರ್ಭದಲ್ಲಿ ಕೊಟ್ರಯ್ಯ ಗುರವಿನ, ಗುರುಶಾಂತಯ್ಯ ಗುರುವಿನ, ಹಾಲಪ್ಪ ಡೊಳ್ಳಿನ್, ಸಣ್ಣ ಹನುಮಪ್ಪ ಬಂಡಿ, ರಾಮಪ್ಪ ಪೂಜಾರಿ, ಮಾರುತಿ ಹೊಂಬಳ, ರಾಮಪ್ಪ ಹೊಂಬಳ ಸೇರಿದಂತೆ ಗ್ರಾಮದ ಹಿರಿಯರು, ಯುವಕರು ಹಾಗೂ ಭಕ್ತರು ಭಾಗವಹಿಸಿದ್ದರು.

# ನಾಳೆ ಗುರುಕುಲ ಆಂಗ್ಲ ಮಾಧ್ಯಮ ಶಾಲೆ ಉದ್ಘಾಟನೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಇಲ್ಲಿನ ನಿಡಗುಂದಿಕೊಪ್ಪ ಶಾಖಾ ಶಿವಯೋಗಮಂದಿರದಲ್ಲಿ ಶ್ರೀ ಚನ್ನಚೇತನ ಗುರುಕುಲ ಆಂಗ್ಲ ಮಾಧ್ಯಮ ಶಾಲೆಯ ಉದ್ಘಾಟನೆ, ಶ್ರೀ ಭಿಮಾಂಬಿಕಾದೇವಿ ಪುರಾಣ ಮಹಾಮಂಗಲ ಹಾಗೂ ಸಾಮೂಹಿಕ ವಿವಾಹ ಸಮಾರಂಭವು ಎ. 22ರಂದು ಬೆಳಿಗ್ಗೆ 10 ಗಂಟೆಗೆ ಜರುಗಲಿದೆ.

ಕಾರ್ಯಕ್ರಮದಲ್ಲಿ ಬಾಲೆಹೊಸೂರ-ಶಿರಹಟ್ಟಿ ಪಕೀರೇಶ್ವರ ಸಂಸ್ಥಾನಮಠದ ಫಕೀರದಿಂಗಾಲೇಶ್ವರ ಸ್ವಾಮೀಜಿ ಹಾಗೂ ಹಾಲಕೆರೆ ಶ್ರೀ ಅನ್ನದಾನೇಶ್ವರ ಸಂಸ್ಥಾನಮಠದ ಮುಪ್ಪಿನ ಬಸವಲಿಂಗ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ಶ್ರೀಮದ್ ಶಿವಯೋಗಮಂದಿರದ ಉಪಾಧ್ಯಕ್ಷರು ಹಾಗೂ ಹಾವೇರಿ ಹುಕ್ಕೇರಿಮಠದ ಡಾ. ಸದಾಶಿವ ಸ್ವಾಮೀಜಿ ಅಧ್ಯಕ್ಷತೆ ವಹಿಸಲಿದ್ದಾರೆ.

ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು, ರೋಣ ಗುಲಗಂಜಿಮಠದ ಗುರುಪಾದ ಸ್ವಾಮೀಜಿ, ಯಲಬುರ್ಗಾ ಶ್ರೀಧರಮುರಡಿ ಹಿರೇಮಠದ ಬಸವಲಿಂಗ ಶಿವಾಚಾರ್ಯರು, ಜಿಗೇರಿ ಹಿರೇಮಠದ ಸಿದ್ದೇಶ್ವರ ಶಿವಾಚಾರ್ಯರು, ಶಿವಾಪೂರದ ಅಡವಿ ಸಿದ್ದೇಶ್ವರಮಠದ ಅಡವಿಸಿದ್ಧರಾಮ ಸ್ವಾಮೀಜಿ, ಸಿದ್ದನಕೊಳ್ಳದ ಡಾ. ಶಿವಕುಮಾರ ಸ್ವಾಮೀಜಿ, ಗಜೇಂದ್ರಗಡ ಟಕ್ಕೇದ ಹಜರತ್ ನಿಜಾಮುದ್ದಿನ ಷಾ ಆಶ್ರಫ್ ಮಕಾಂದಾರ, ಷಣ್ಮುಖಪ್ಪ ಧರ್ಮರ ಹಾಗೂ ನಾಗರಾಜ ಧರ್ಮರ ಸಮ್ಮುಖ ವಹಿಸುವರು.

ಶಿಕ್ಷಣ ಸಚಿವ ಮಧು ಬಂಗಾರಪ್ಪ, ಶಾಸಕ ಜಿ.ಎಸ್. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹಾಗೂ ಮಾಜಿ ಸಚಿವ ಕಳಕಪ್ಪ ಬಂಡಿ ಸೇರಿದಂತೆ ಅನೇಕ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು ಸರ್ವರು ಕಾರ್ಯಕ್ರಮದಲ್ಲಿ ಭಾಗಿಯಾಗಬೇಕು ಎಂದು ಪ್ರಕರಣೆಯಲ್ಲಿ ಸಂಘಟಿಕರು ತಿಳಿಸಿದ್ದಾರೆ.

**ನವೀಕರಣಗೊಂಡ ಬಸವೇಶ್ವರ ಪುತ್ಥಳಿ ಅನಾವರಣಗೊಳಿಸಿದ ಶಾಸಕ ಕೆ. ನೇಮಿರಾಜ ನಾಯ್ಕ**

# ಅನುಭವ ಮಂಟಪವೇ ಪ್ರಜಾಪ್ರಭುತ್ವದ ಮೂಲ



> "ಅನುಭವ ಮಂಟಪದ ಮೂಲಕ ಬಸವಣ್ಣನವರು ಜಗತ್ತಿಗೆ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಪರಿಚಯಿಸಿದರು. ಜಾತಿ, ಧರ್ಮ, ಲಿಂಗಭೇದವಿಲ್ಲದೆ ಸಮಾನತೆ ಸಾರಿದ ಮಹಾನ್ ದಾರ್ಶನಿಕರು ಅವರು."
> **– ಕೆ. ನೇಮಿರಾಜ ನಾಯ್ಕ, ಶಾಸಕ.**

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಬಸವಣ್ಣನವರು 12ನೇ ಶತಮಾನದಲ್ಲೇ ಅನುಭವ ಮಂಟಪದ ಮೂಲಕ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಜಗತ್ತಿಗೆ ಪರಿಚಯಿಸಿದರು ಎಂದು ಶಾಸಕ ಕೆ. ನೇಮಿರಾಜ ನಾಯ್ಕ ಹೇಳಿದರು.

ಪಟ್ಟಣದ ಬಸವೇಶ್ವರ ವೃತ್ತದಲ್ಲಿ ನವೀಕರಣಗೊಂಡ ಬಸವಣ್ಣನವರ ಪುತ್ಥಳಿಯನ್ನು ರಿಮೋಟ್ ಮೂಲಕ ಅನಾವರಣಗೊಳಿಸಿ ಮಾತನಾಡಿದ ಅವರು, ಅನುಭವ ಮಂಟಪವು ಜಾತಿ, ಧರ್ಮ, ಲಿಂಗಭೇದವಿಲ್ಲದೆ ಎಲ್ಲ ವರ್ಗದ ಜನರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳುವ ವಿಶಿಷ್ಟ ಚಿಂತನ ವೇದಿಕೆಯಾಗಿತ್ತು ಎಂದು ಹೇಳಿದರು.

ಇದು ನಿಜವಾದ ಪ್ರಜಾಪ್ರಭುತ್ವದ ಆಧಾರವಾಗಿದ್ದು, ಬಸವಣ್ಣನವರು ನುಡಿದಂತೆ ನಡೆದು ಸಮಾನತೆ, ನ್ಯಾಯ ಮತ್ತು ಮಾನವೀಯ ಮೌಲ್ಯಗಳನ್ನು ಸಾರಿದ ಮಹಾನ್ ಸಮಾಜ ಸುಧಾರಕರಾಗಿದ್ದರು ಎಂದು ಅಭಿಪ್ರಾಯಪಟ್ಟರು. ಅಂದಿನ ಕಾಲದಲ್ಲಿ ಅಕ್ಕಮಹಾದೇವಿ ಸೇರಿದಂತೆ ಮಹಿಳೆಯರಿಗೆ ದೊರೆತ ಮಾನ್ಯತೆ ಇಂದಿನ ಸಂಸದೀಯ ವ್ಯವಸ್ಥೆಯಲ್ಲಿ ಕಾಣಿಸುತ್ತಿಲ್ಲ ಎಂದು ಅವರು ವಿಷಾದ ವ್ಯಕ್ತಪಡಿಸಿದರು.

ಸುಮಾರು 65 ಲಕ್ಷ ವೆಚ್ಚದಲ್ಲಿ ನವೀಕರಣಗೊಂಡ ಬಸವಣ್ಣನವರ ಸರ್ಕಲ್ ಪುತ್ಥಳಿಯನ್ನು ಅಚ್ಚುಕಟ್ಟಾಗಿ ನಿರ್ಮಿಸಿರುವ ವಿಜಯ್ ಕುಮಾರ್ ಹಾಗೂ ಅವರ ಸಂಗಡಿಗರಿಗೆ ಧನ್ಯವಾದ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮರಿಯಮ್ಮನಹಳ್ಳಿ ಮಲ್ಲಿಕಾರ್ಜುನ ಸ್ವಾಮಿ, ನಂದಿಪುರ ಮಹೇಶ್ವರ ಸ್ವಾಮಿ, ಹಾಲಸ್ವಾಮಿ ಮಠದ ಹಾಲ ಸಿದ್ದೇಶ್ವರ ಸ್ವಾಮಿ, ಬಾಚಿಗೊಂಡನಹಳ್ಳಿ ಶಿವ ಮಹಾಂತ ಸ್ವಾಮಿ, ಕಡಲಬಾಳು ಶಾಖ ಗವಿಮಠದ ಮರಿ ಮಹಾಂತ ಸ್ವಾಮಿ, ವೈ. ಮಲ್ಲಿಕಾರ್ಜುನ, ಕೊಟ್ರೇಶ್ ಶೆಟ್ಟರ್, ಕಿನ್ನಾಳ್ ಸುಭಾಷ್ ಉಪಸ್ಥಿತರಿದ್ದರು.

ಪ್ರಸ್ತಾವಿಕವಾಗಿ ಮಾತನಾಡಿದ ಬಾದಾಮಿ ಮೃತ್ಯುಂಜಯ (ಮುತ್ತಣ್ಣ) ಅವರು, ಶಾಸಕರ ಅಮೃತ ಹಸ್ತದಿಂದ ಪುತ್ಥಳಿ ಅನಾವರಣಗೊಂಡಿರುವುದು ಸಂತಸದ ಸಂಗತಿಯಾಗಿದೆ ಎಂದರು. ಪೂಜ್ಯರು ಆಶೀರ್ವಚನ ನೀಡಿದರು.

ಕಾರ್ಯಕ್ರಮದ ನಿರೂಪಣೆಯನ್ನು ಶಿವಶಂಕರ ಸ್ವಾಮಿ ನಿರ್ವಹಿಸಿದರು. ಸ್ವಾಗತವನ್ನು ಇಟಗಿ ಪ್ರಭಾಕರ್, ಪ್ರಾರ್ಥನೆಯನ್ನು ಶಾರದಾ ಮಂಜುನಾಥ್, ರೈತ ಗೀತೆಯನ್ನು ಮಹಾಂತೇಶ್ ಹಾಗೂ ಹನುಮೇಶ್ ನಿರ್ವಹಿಸಿದರು.

ಈ ಸಂದರ್ಭದಲ್ಲಿ ಶಿವಕುಮಾರ್ ಗೌಡ್ರು (ಉಪ ತಹಸೀಲ್ದಾರ್), ಕಮಲಮ್ಮ, ಇಂದೂಮತಿ ಮೇಡಂ, ಮಂಜುನಾಥ್ ಗೌಡ್ರು, ಆನಂದ ದೇವನಹಳ್ಳಿ, ಜೆ.ಎಂ. ಜಗದೀಶ್, ಕನ್ನಿಹಳ್ಳಿ ಚಂದ್ರಶೇಖರ್, ಬಡಿಗೇರ್ ಸಿದ್ದರಾಜು, ಉಪ್ಪಾರ್ ಕನಕಪ್ಪ, ಸತೀಶ್ ಪಾಟೀಲ್, ಜಾಲಿ ಅಶೋಕ್ ಸೇರಿದಂತೆ ಸಮಾಜದ ಗಣ್ಯರು, ಯುವಕರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

***ಶಂಕರನ್ ನಂಬೂದರಿ ಸ್ವಾಮೀಜಿ ನೇತೃತ್ವದಲ್ಲಿ ವಿಶೇಷ ಪೂಜೆ**

# ಅಯ್ಯಪ್ಪ ದೇವಸ್ಥಾನದಲ್ಲಿ ಪ್ರತಿಷ್ಠಾಪನಾ ಮಹೋತ್ಸವ ಭಕ್ತಿಭಾವದಿಂದ



> "ಭಕ್ತಿಭಾವದಿಂದ ನಡೆಯುವ ಪೂಜೆಗಳು ಜನರಲ್ಲಿ ಆಧ್ಯಾತ್ಮಿಕತೆ ಮತ್ತು ಶಾಂತಿಯನ್ನು ಹೆಚ್ಚಿಸುತ್ತವೆ."
> **– ಶಂಕರನ್ ನಂಬೂದರಿ ಸ್ವಾಮೀಜಿ**

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ರಾಮನಗರದಲ್ಲಿರುವ ಅಯ್ಯಪ್ಪ ದೇವಸ್ಥಾನದಲ್ಲಿ ಶ್ರೀ ಈಶ್ವರ ಮತ್ತು ಶ್ರೀ ಅಯ್ಯಪ್ಪ ಸ್ವಾಮಿ ಚಾರಿಟೇಬಲ್ ಸೇವಾ ಟ್ರಸ್ಟ್ (ರಿ) ವತಿಯಿಂದ ಪ್ರತಿಷ್ಠಾಪನಾ ದಿನ ಮಹೋತ್ಸವವನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಕಾರ್ಯಕ್ರಮವು ಬೆಳಿಗ್ಗೆ 6 ಗಂಟೆಗೆ ಅಭಿಷೇಕ ಹಾಗೂ ಪೂಜೆಯೊಂದಿಗೆ ಆರಂಭಗೊಂಡಿತು. ನಂತರ ಗಣಪತಿ ಹೋಮ, ಕಳಸ ಪೂಜೆ, ಗಣಪತಿ ಹಾಗೂ ಸುಬ್ರಹ್ಮಣ್ಯ ಪೂಜೆಗಳು ವಿಧಿವಿಧಾನವಾಗಿ ನೆರವೇರಿದವು.

ಬೆಳಿಗ್ಗೆ 10 ಗಂಟೆಯಿಂದ ಅಯ್ಯಪ್ಪ ಸ್ವಾಮಿಯ ವಿಶೇಷ ಪೂಜೆಗಳು ಅಷ್ಟಾಭಿಷೇಕ, ಕಳಸಾಭಿಷೇಕ ಹಾಗೂ ಪುಷ್ಪಾಭಿಷೇಕದೊಂದಿಗೆ ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆದವು. ಈ ಎಲ್ಲಾ ಪೂಜಾ ಕಾರ್ಯಕ್ರಮಗಳನ್ನು ಶಂಕರನ್ ನಂಬೂದರಿ ಸ್ವಾಮೀಜಿ ಅವರು ಶಾಸ್ತ್ರೋಕ್ತವಾಗಿ ನೆರವೇರಿಸಿದರು. ಮಧ್ಯಾಹ್ನ 11:30ಕ್ಕೆ ಮಹಾ ಮಂಗಳಾರತಿ ನಡೆಯಿತು.

ನಂತರ ಭಕ್ತಾದಿಗಳಿಗೆ ಅನ್ನದಾನ ವ್ಯವಸ್ಥೆ ಮಾಡಲಾಗಿದ್ದು, ನೂರಾರು ಭಕ್ತರು ಭಾಗವಹಿಸಿ ಪ್ರಸಾದ ಸ್ವೀಕರಿಸಿದರು.

ಇದೇ ಸಂದರ್ಭದಲ್ಲಿ ದೇವಸ್ಥಾನದ ಅಡುಗೆಮನೆ ನಿರ್ಮಾಣಕ್ಕಾಗಿ ಭೂಮಿ ಪೂಜೆಯೂ ನೆರವೇರಿಸಲಾಯಿತು.

ಸಂಜೆ ದೀಪಾರಾಧನೆ ಹಾಗೂ ರಾತ್ರಿ ಪೂಜೆಗಳೊಂದಿಗೆ ದಿನಪೂರ್ತಿ ಕಾರ್ಯಕ್ರಮಗಳು ನಡೆದವು. ರಾತ್ರಿ ನಡೆದ ಹರಿವರಾಸನಂ ಭಕ್ತರ ಮನಸ್ಸಿಗೆ ಆಧ್ಯಾತ್ಮಿಕ ಸ್ಪಂದನ ನೀಡಿತು.

ಈ ಮಹೋತ್ಸವದಲ್ಲಿ ಟ್ರಸ್ಟ್‌ನ ಸದಸ್ಯರು ಸೇರಿದಂತೆ ಪಟ್ಟಣ ಹಾಗೂ ಸುತ್ತಮುತ್ತಲಿನ ಹಳ್ಳಿಗಳಿಂದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವರ ಆಶೀರ್ವಾದ ಪಡೆದರು.

**ದಕ್ಷಿಣ ರಾಜ್ಯಗಳ ಹಿತಾಸಕ್ತಿಗೆ ಧಕ್ಕೆ ತರುವ ಪ್ರಯತ್ನ– ಹುಡೇದ್ ಗುರುಬಸವರಾಜ್ ಆರೋಪ**

# ಪ್ರಜಾಪ್ರಭುತ್ವದ ಕಗ್ಗೊಲೆಗೆ ಬಿಜೆಪಿ ಯತ್ನ!

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಬಿಜೆಪಿ ಪ್ರಜಾಪ್ರಭುತ್ವದ ಕಗ್ಗೊಲೆಗೆ ಯತ್ನಿಸುತ್ತಿದ್ದು, ದಕ್ಷಿಣ ಭಾರತದ ರಾಜ್ಯಗಳ ರಾಜಕೀಯ ಅಸ್ಮಿತೆಯನ್ನು ಕುಗ್ಗಿಸಲು ಪ್ರಯತ್ನ ನಡೆಸುತ್ತಿದೆ ಎಂದು ವಿಜಯನಗರ ಜಿಲ್ಲಾ ಕಾಂಗ್ರೆಸ್ ವಕ್ತಾರ ಹುಡೇದ್ ಗುರುಬಸವರಾಜ್ ಆರೋಪಿಸಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮಿಳುನಾಡು ಮತ್ತು ಪಶ್ಚಿಮ ಬಂಗಾಳ ರಾಜ್ಯಗಳ ಚುನಾವಣೆಯಲ್ಲಿ ಸೋಲು ತಪ್ಪಿಸಿಕೊಳ್ಳುವ ಉದ್ದೇಶದಿಂದ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ರಾಜಕೀಯ ಷಡ್ಯಂತ್ರ ನಡೆಸುತ್ತಿದ್ದಾರೆ ಎಂದು ಹೇಳಿದರು.



ಮಹಿಳೆಯರಿಗೆ 33 ಶೇಕಡಾ ಮೀಸಲು ನೀಡುವುದು ಕಾಂಗ್ರೆಸ್ ಪಕ್ಷದ ಬಹುಕಾಲದ ಕನಸಾಗಿದ್ದು, 1992ರಲ್ಲಿ ದಿವಂಗತ ಪ್ರಧಾನಿ ರಾಜೀವ್ ಗಾಂಧಿಯವರ ಪ್ರಯತ್ನದಿಂದ ಸ್ಥಳೀಯ ಸಂಸ್ಥೆಗಳಲ್ಲಿ ಮೀಸಲು ಜಾರಿಗೊಂಡಿತ್ತು ಎಂದು ವಿವರಿಸಿದರು.

2023ರಲ್ಲಿ ಮಹಿಳಾ ಮೀಸಲು ಮಸೂದೆ ಮಂಡನೆಯಾಗಿದ್ದಾಗ ಕಾಂಗ್ರೆಸ್ ಪಕ್ಷ ವಿರೋಧಿಸಿಲ್ಲ. ಆದರೆ ಪ್ರಧಾನಿ ನರೇಂದ್ರ ಮೋದಿಯವರು ಕಳೆದ ಮೂರು ವರ್ಷಗಳಿಂದ ಅದನ್ನು ಜಾರಿಗೊಳಿಸದೆ, 2011ರ ಜನಗಣತಿ ಆಧಾರದಲ್ಲಿ ಕ್ಷೇತ್ರ ವಿಂಗಡನೆ ಮಾಡಲು ಮುಂದಾಗಿರುವುದು ಅನುಮಾನಾಸ್ಪದ ಎಂದು ಆರೋಪಿಸಿದರು.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರ ನೇತೃತ್ವದಲ್ಲಿ ಯುಪಿಎ ಒಕ್ಕೂಟ ಈ ಮಸೂದೆಯನ್ನು ವಿರೋಧಿಸುವ ಮೂಲಕ ಸಂವಿಧಾನದ ಆಶಯಗಳನ್ನು ಉಳಿಸಿಕೊಂಡಿದೆ. ಇದರಿಂದ ದಕ್ಷಿಣ ರಾಜ್ಯಗಳಾದ ಕರ್ನಾಟಕ, ತಮಿಳುನಾಡು, ಕೇರಳ, ಆಂಧ್ರಪ್ರದೇಶ ಹಾಗೂ ತೆಲಂಗಾಣಗಳಿಗೆ ಆಗುತ್ತಿದ್ದ ಅಪಾಯ ತಪ್ಪಿಸಲಾಗಿದೆ ಎಂದು ಹೇಳಿದರು.

> "ಬಿಜೆಪಿ ದಕ್ಷಿಣ ಭಾರತದ ರಾಜಕೀಯ ಅಸ್ಮಿತೆಯನ್ನು ಕುಗ್ಗಿಸಲು ಪ್ರಯತ್ನಿಸುತ್ತಿದ್ದು, ಇದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಧಕ್ಕೆ ತರುತ್ತದೆ."
> **– ಹುಡೇದ್ ಗುರುಬಸವರಾಜ್,** ವಿಜಯನಗರ ಜಿಲ್ಲಾ ಕಾಂಗ್ರೆಸ್ ವಕ್ತಾರ

ಮೂಲ ಮಹಿಳಾ ಮೀಸಲು ಜಾರಿಗೆ ತಂದರೆ ಕಾಂಗ್ರೆಸ್ ಹಾಗೂ ಅದರ ಮಿತ್ರ ಪಕ್ಷಗಳು ಬೆಂಬಲ ನೀಡುವುದಾಗಿ ರಾಹುಲ್ ಗಾಂಧಿಯವರು ಸ್ಪಷ್ಟಪಡಿಸಿದ್ದರೂ, ಬಿಜೆಪಿ ಆಡಳಿತದಲ್ಲಿರುವ ಉತ್ತರ ರಾಜ್ಯಗಳಿಗೆ ಅನುಕೂಲವಾಗುವ ರೀತಿಯಲ್ಲಿ ಕ್ಷೇತ್ರ ವಿಂಗಡನೆ ಮಾಡಲು ಯತ್ನಿಸಲಾಗಿದೆ ಎಂದು ಆರೋಪಿಸಿದರು.

ರಾಜ್ಯದ ಹಿತಾಸಕ್ತಿಗೆ ಧಕ್ಕೆ ತರುವ ಈ ಮಸೂದೆಯನ್ನು ಕರ್ನಾಟಕದ ಬಿಜೆಪಿ ಸಂಸದರು ವಿರೋಧಿಸದೆ ಬೆಂಬಲಿಸಿರುವುದು ರಾಜ್ಯಕ್ಕೆ ದುರಂತವಾಗಿದೆ ಎಂದು ಹುಡೇದ್ ಗುರುಬಸವರಾಜ್ ಅಭಿಪ್ರಾಯಪಟ್ಟರು.

# ಕಾಳಿದಾಸ ಶಿಕ್ಷಣ ಸಂಸ್ಥೆಯ ರಜತ ಮಹೋತ್ಸವದಲ್ಲಿ ಹಾಸ್ಯ ಸಂಜೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯ ರಜತ ಮಹೋತ್ಸವ ವರ್ಷಾಚರಣೆ ಅಂಗವಾಗಿ ನಗರದ ಬಯಲು ಆಂಜನೇಯ ದೇವಸ್ಥಾನ ಆವರಣದಲ್ಲಿ ಗಂಗಾವತಿ ಪ್ರಾಣೇಶ, ಬಸವರಾಜ ಮಹಾಮನಿ, ನರಸಿಂಹ ಜೋಶಿ ತಂಡದವರಿಂದ ಹಾಸ್ಯ ಸಂಜೆ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮವನ್ನು ನಿವೃತ್ತ ನ್ಯಾಯಾಧೀಶರಾದ ಎಸ್.ಜಿ. ಪಲ್ಲೇದ ಅವರು ಉದ್ಘಾಟಿಸಿದರು.

ಹಾಸ್ಯ ಕಲಾವಿದರು ತಮ್ಮ ವಿನೋದಭರಿತ ಮಾತುಗಳಿಂದ ಪ್ರೇಕ್ಷಕರನ್ನು ಮನರಂಜಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಪ್ರೇಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹಾಸ್ಯ ಸಂಜೆಯನ್ನು ಆಸ್ವಾದಿಸಿದರು.

ಈ ಸಂದರ್ಭದಲ್ಲಿ ಶಶಿಧರ ರೊಳ್ಳಿ, ವೈ.ಬಿ. ಬಾನಾಪೂರ, ಬಿ.ಬಿ. ಬಾವಿಕಟ್ಟಿ, ಕೆ.ಬಿ. ಕಂಬಳಿ, ರಮೇಶ ವಡವಿ, ಆರ್.ಎಂ. ನಿಂಬನಾಯ್ಕರ, ವೈ.ಡಿ. ಜಡದೇಲಿ, ನೀಲಕಂಠ ಮುರಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.




# ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಬಸವರಾಜ್ ಅಡವಿಬಾವಿ ವರ್ಗಾವಣೆ



**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನಲ್ಲಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಆಗಿ ಸೇವೆ ಸಲ್ಲಿಸುತ್ತಿದ್ದ ಬಸವರಾಜ್ ಅಡವಿಬಾವಿ ಅವರನ್ನು ರಾಯಚೂರು ಜಿಲ್ಲೆಯ ಇಡುಪನೂರು ಪೊಲೀಸ್ ಠಾಣೆಗೆ ವರ್ಗಾವಣೆ ಮಾಡಲಾಗಿದೆ.

ಮಹಾನಿರೀಕ್ಷಕರು ನೀಡಿದ ಆದೇಶದಂತೆ, ಈ ವರ್ಗಾವಣೆ ತಕ್ಷಣದಿಂದಲೇ ಜಾರಿಗೆ ಬರಲಿದೆ ಎಂದು ತಿಳಿದು ಬಂದಿದೆ.

**ಜೀವನದಲ್ಲಿ 'ಕಾಯಕ' ಮತ್ತು 'ದಾಸೋಹ' ಅಳವಡಿಸಿಕೊಳ್ಳಲು ಸಿದ್ದಪ್ಪ ಲಿಂಗದಾಳ ಕರೆ**

# ಬಸವಣ್ಣನವರ ತತ್ವಗಳು ಸಾರ್ವಕಾಲಿಕ ಸತ್ಯ



**■ವಿಜಯಸಾಕ್ಷಿ ಸುದ್ದಿ, ಗದಗ**

ಜಗಜ್ಯೋತಿ ಬಸವಣ್ಣನವರ ತತ್ವಗಳು ಯಾವುದೇ ಒಂದು ಸಮುದಾಯಕ್ಕೆ ಸೀಮಿತವಾಗಿಲ್ಲ, ಅವು ಸಾರ್ವಕಾಲಿಕ ಸತ್ಯಗಳಾಗಿದ್ದು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಶಾಖೆಯ ಕಾರ್ಯಾಧ್ಯಕ್ಷ ಸಿದ್ದಪ್ಪ ಎನ್. ಲಿಂಗದಾಳ ಹೇಳಿದರು.

ಲಕ್ಕುಂಡಿಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಜಗಜ್ಯೋತಿ ಬಸವೇಶ್ವರರ ಜನ್ಮದಿನಾಚರಣೆ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಪುಷ್ಪಾರ್ಚನೆ ನೆರವೇರಿಸಿ ಅವರು ಮಾತನಾಡಿದರು.

12ನೇ ಶತಮಾನದ ಕ್ರಾಂತಿಕಾರಿ ಸಂತ ಹಾಗೂ ಸಮಾಜ ಸುಧಾರಕರಾದ ಬಸವಣ್ಣನವರು 'ಕಾಯಕವೇ ಕೈಲಾಸ' ಮತ್ತು 'ದಾಸೋಹ' ಎಂಬ ಮಹತ್ವದ ತತ್ವಗಳನ್ನು ನೀಡಿದ್ದು, ಇವು ಇಂದಿನ ಆಧುನಿಕ ಸಮಾಜಕ್ಕೂ ಮಾರ್ಗದರ್ಶಕವಾಗಿವೆ ಎಂದು ತಿಳಿಸಿದರು.

ಸಮಾನತೆ, ಕರುಣೆ ಹಾಗೂ ಸೇವಾಭಾವದಿಂದ ಕಾರ್ಯನಿರ್ವಹಿಸುವುದೇ ಬಸವಣ್ಣನವರ ತತ್ವಗಳ ಸಾರವಾಗಿದ್ದು, ವಿಶೇಷವಾಗಿ ಸರ್ಕಾರಿ ಸೇವೆಯಲ್ಲಿ ಇರುವವರು ಜನರಿಗೆ ಸಮಾನತೆ ಹಾಗೂ ಮಾನವೀಯತೆ ಆಧಾರಿತ ಸೇವೆ ನೀಡಿದರೆ ಮಾತ್ರ ಅವರ ಜಯಂತಿ ಆಚರಣೆಗೆ ಅರ್ಥ ಸಿಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಎಸ್.ಬಿ. ಗಡಾದ ಮಾತನಾಡಿ, ಬಸವಣ್ಣನವರು ಇಷ್ಟಲಿಂಗ ತತ್ವದ ಮೂಲಕ ಜಾತಿ-ಭೇದ ನಿವಾರಣೆಗೆ ಒತ್ತು ನೀಡಿದರು. ಸರಳ ಕನ್ನಡದಲ್ಲಿ ರಚಿಸಿದ ವಚನ ಸಾಹಿತ್ಯವು ಜನಸಾಮಾನ್ಯರಿಗೆ ತಲುಪುವಂತಿದ್ದು, ಅವರ ಅಂಕಿತನಾಮ 'ಕೂಡಲಸಂಗಮದೇವ' ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಹುಲಿಗೆಮ್ಮ ಮಾದರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಮ್ಸ್ ವೈದ್ಯಾಧಿಕಾರಿ ಮುತ್ತಣ್ಣ ಹಟ್ಟಿಮನಿ, ಆರೀಪಾ ಕಿರಟಗೇರಿ, ಸಲ್ಮಾ ಕುಕನೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಬೆಟಗೇರಿಯ ಬಸಪ್ಪ ಹಿರೇಮನಿ ನಿಧನ**

# ನೇತ್ರ-ದೇಹದಾನದಿಂದ ಸಾವಿನ ಬಳಿಕವೂ ಸಾರ್ಥಕತೆ!




**■ವಿಜಯಸಾಕ್ಷಿ ಸುದ್ದಿ, ಗದಗ**

ಭಾನುವಾರ ನಿಧನರಾದ ಬೆಟಗೇರಿಯ ಬಸಪ್ಪ ಅಮರಪ್ಪ ಹಿರೇಮನಿ (87) ಅವರ ಕುಟುಂಬಸ್ಥರು ನೇತ್ರ ಹಾಗೂ ದೇಹದಾನ ಮಾಡುವ ಮೂಲಕ ಮಾನವೀಯ ಮೌಲ್ಯವನ್ನು ಮೆರೆದಿದ್ದಾರೆ.

ಮೃತರಿಗೆ ಪತ್ನಿ, ಇಬ್ಬರು ಪುತ್ರರು ಹಾಗೂ ಇಬ್ಬರು ಪುತ್ರಿಯರು ಇದ್ದಾರೆ. ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಪದಾಧಿಕಾರಿಗಳು ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿ ನೇತ್ರ ಮತ್ತು ದೇಹದಾನಕ್ಕೆ ಪ್ರೇರಣೆ ನೀಡಿದ ಹಿನ್ನೆಲೆಯಲ್ಲಿ ಕುಟುಂಬಸ್ಥರು ಸಹ ಒಪ್ಪಿಗೆ ಸೂಚಿಸಿದರು.



ಗದಗ ಜಿಮ್ಸ್ ಆಸ್ಪತ್ರೆಯ ನೇತ್ರ ತಜ್ಞರ ತಂಡವು ನೇತ್ರದಾನ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿತು. ನಂತರ ಜಿಮ್ಸ್ ಮೆಡಿಕಲ್ ಕಾಲೇಜಿನ ಅಂಗರಚನಾ ಶಾಸ್ತ್ರ ವಿಭಾಗದ ವಿದ್ಯಾರ್ಥಿಗಳ ಅಧ್ಯಯನಕ್ಕಾಗಿ ಮೃತರ ದೇಹವನ್ನು ಕುಟುಂಬಸ್ಥರು ದಾನ ನೀಡಿದರು.

ಈ ಸಂದರ್ಭದಲ್ಲಿ ಕುಟುಂಬದ ಸದಸ್ಯರೊಂದಿಗೆ ಜಿಮ್ಸ್ ತಜ್ಞ ವೈದ್ಯರು, ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಖಜಾಂಚಿ ರೇಣುಕಪ್ರಸಾದ ಹಿರೇಮಠ, ಪ್ರಕಾಶ ಮುದಗಲ್ಲ, ಭೂಸ್ತ ಸಹೋದರರು, ವಿನಾಯಕ ಅಬ್ಬಿಗೇರಿ, ಅಜ್ಜಣ್ಣ ಮಲ್ಲಾಡದ, ಅಂದಪ್ಪ ಉಮರಾಣಿ, ಸತೀಶ ಮುದಗಲ್ಲ, ಮಂಜುನಾಥ ಬೇಲೇರಿ, ಮಹೇಶ ಬೇಲೇರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka